# ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 214 | ಆರ್‌ಎನ್ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 17–03–2025 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 214 | RNI No: KARKAN/2023/88462 | KA/SK/CTA-874/2024-2026 | Chitradurga | Date: 17-03-2025 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು
ದೇಶಾಭಿವೃದ್ಧಿಯಲ್ಲಿ ಯುವ ಜನರ ಪಾತ್ರ ಬಹಳ ಅಗತ್ಯ: ಡಾ.ಪ್ರಭಾ ಮಲ್ಲಿಕಾರ್ಜುನ್ 2
ಸಾರ್ವಜನಿಕರ ಹಿತರಕ್ಷಣೆಗೆ ಸರ್ಕಾರ ಬದ್ಧ: ಶಾಸಕ ಟಿ.ರಘುಮೂರ್ತಿ 3
ಹೊಸದುರ್ಗ: ಇಬ್ಬರು ಅಂತರ್ ಜಿಲ್ಲಾ ಸರಗಳ್ಳರ ಬಂಧನ, ಚಿನ್ನಾಭರಣ ವಶ 4



ಸುದ್ದಿ, ಜಾಹಿರಾತಿಗೆ 9686622252


## ಕಾಯಕ ಯೋಗಿಗೆ ಭಕ್ತಿ ಭಾವ ಸಮರ್ಪಣೆ

# ನಾಯಕನಹಟ್ಟಿ ರಥೋತ್ಸವ



### ರೂ.63 ಲಕ್ಷಕ್ಕೆ ಮುಕ್ತಿಭಾವುಟ ಹರಾಜು

ರಥೋತ್ಸವಕ್ಕೂ ಮುನ್ನ ಶ್ರೀ ಗುರು ತಿಪ್ಪೇರುದ್ರಸ್ವಾಮಿ ಜಾತ್ರೆಯ ವಿಶೇಷಗಳಲ್ಲಿ ಒಂದಾಗಿರುವ ಮುಕ್ತಿ ಬಾವುಟದ ಹರಾಜು ನಡೆಸಲಾಯಿತು. ಈ ಬಾರಿ ರಥದ ಮುಂದೆ ನಡೆದ ಹಟ್ಟಿ ತಿಪ್ಪೇಶನ ಮುಕ್ತಿ ಭಾವುಟ ಭರ್ಜರಿ ಮೊತ್ತಕ್ಕೆ ಹರಾಜಾಯಿತು. ಈ ವರ್ಷದ ಮುಕ್ತಿ ಭಾವುಟವನ್ನು ಬೆಂಗಳೂರು ಮೂಲದ, ನಾಯಕನಹಟ್ಟಿ ಅಳಿಯ ಉದ್ಯಮಿ ತೇಜಸ್ವಿ ಆರಾಧ್ಯ ಅವರು ರೂ.63 ಲಕ್ಷ ಗಳಿಗೆ ಹರಾಜು ಮೂಲಕ ಪಡೆದುಕೊಂಡರು.

» **ಚಿತ್ರದುರ್ಗ**

ಮಾಡಿದಷ್ಟು ನೀಡು ಭಿಕ್ಷೆ ಎಂಬ ತತ್ವ ಸಂದೇಶ ಸಾರಿ ಶ್ರೀಕ್ಷೇತ್ರ ನಾಯಕನಹಟ್ಟಿಯಲ್ಲಿ ನೆಲೆಸಿದ ಕಾಯಕಯೋಗಿ ಶ್ರೀ ಗುರು ತಿಪ್ಪೇರುದ್ರಸ್ವಾಮಿ ರಥೋತ್ಸವ ಭಾನುವಾರ ವಿಜೃಂಭಣೆಯಿಂದ ಜರುಗಿತು. ಸುಡು ಬಿಸಿಲ ನಡುವೆಯೂ ಲಕ್ಷಾಂತರ ಭಕ್ತರು ವೈಭವದ ತಿಪ್ಪೇರುದ್ರಸ್ವಾಮಿ ರಥೋತ್ಸವಕ್ಕೆ ಸಾಕ್ಷೀಯಾದರು. ಭಕ್ತಿ ಭಾವ ಸಮರ್ಪಿಸಿದರು.

ಮಧ್ಯ ಕರ್ನಾಟಕದ ಐತಿಹಾಸಿಕ ನಾಯಕನಹಟ್ಟಿ ಗುರು ತಿಪ್ಪೇರುದ್ರಸ್ವಾಮಿ ದೊಡ್ಡ ರಥೋತ್ಸವ ಕಣ್ತುಂಬಿಕೊಳ್ಳಲು ಭಕ್ತರು ಬೆಳಿಗ್ಗೆಯಿಂದಲೇ ಜಾತ್ರೆಗಾಗಿ ನಾಯಕನಹಟ್ಟಿಯತ್ತ ಮುಖ ಮಾಡಿದ್ದರು. ಗುರು ತಿಪ್ಪೇರುದ್ರಸ್ವಾಮಿಯ ಹೊರಮಠ ಹಾಗೂ ಒಳಮಠ ಎರಡೂ ಕಡೆಗಳಲ್ಲಿ ಬೆಳಗ್ಗೆಯಿಂದಲೇ ಬಿಡುವಿಲ್ಲದಂತೆ ಪೂಜಾ ಕಾರ್ಯಗಳು ನಡೆದವು. ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು. ಮಧ್ಯಾಹ್ನ 2 ಗಂಟೆಯಿಂದಲೇ ಒಳಮಠದಲ್ಲಿ ಮುಖ್ಯ ಅರ್ಚಕರ ನೇತೃತ್ವದಲ್ಲಿ ಉತ್ಸವ ಮೂರ್ತಿ ಹೊತ್ತು ತರುವ ಪಲ್ಲಕ್ಕಿಯನ್ನು ಧಾರ್ಮಿಕ ವಿಧಿ ವಿಧಾನಗಳಿಂದ ಸಿಂಗರಿಸಲಾಯಿತು. ಪಲ್ಲಕ್ಕಿಯಲ್ಲಿ ಉತ್ಸವ ಮೂರ್ತಿಯನ್ನು ಇರಿಸಿ, ರಥೋತ್ಸವದ ಬಳಿ ತಂದು ಸಜ್ಜುಗೊಳಿಸಲಾಯಿತು. ಮಧ್ಯಾಹ್ನ 4.05 ರ ಸುಮಾರಿಗೆ ಚಿತ್ತಾ ನಕ್ಷತ್ರದಲ್ಲಿ ಅಸಂಖ್ಯ ಭಕ್ತರು ತಿಪ್ಪೇರುದ್ರಸ್ವಾಮಿ ರಥವನ್ನು ರಥ ತೇರುಬೀದಿಯಿಂದ ಹೊರಮಠದವರೆಗೆ ಎಳೆಯುವ ಮೂಲಕ ಭಕ್ತಿ ಸಮರ್ಪಣೆ ಮಾಡಿದರು.

ರಥವು ತೇರು ಬೀದಿಯಿಂದ ಪಾದಗಟ್ಟೆಯವರೆಗೆ ಚಲಿಸುವಾಗ ಭಕ್ತರು ರಥಕ್ಕೆ ಬಾಳೆಹಣ್ಣು, ಕಾಳುಮೆಣಸು, ಧವನ, ಹೂವು, ಚೂರು ಬೆಲ್ಲವನ್ನು ಸಮರ್ಪಿಸಿ ತಮ್ಮ ಇಷ್ಟಾರ್ಥವನ್ನು ಈಡೇರಿಸುವಂತೆ ಭಕ್ತಿ ಪೂರ್ವಕವಾಗಿ ಪ್ರಾರ್ಥಿಸುತ್ತಾ ' ಶ್ರೀ. ತಿಪ್ಪೇರುದ್ರಸ್ವಾಮಿಗೆ ಜಯವಾಗಲಿ', 'ಕಾಯಕ ಯೋಗಿಗೆ ಜಯವಾಗಲಿ' ತಿಪ್ಪೇರುದ್ರಸ್ವಾಮಿ ಮಹಾರಾಜ್ ಕಿ ಜೈ ಎನ್ನುವ ಜಯಘೋಷ ಕೂಗುತ್ತಾ ರಥದ ದೊಡ್ಡ ಗಾತ್ರದ ಮಿಣಿ ಹಗ್ಗ ಎಳೆದು ಧನ್ಯರಾದರು.ನಾಡಿನ ಸುಭೀಕ್ಷೆ ಹಾಗೂ ಉತ್ತಮ ಮಳೆ ಬೆಳೆಗಾಗಿ ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಸಂಸದ ಗೋವಿಂದ ಕಾರಜೋಳ, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್.ವೈ.ಗೋಪಾಲಕೃಷ್ಣ, ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ ಬಾಬು, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಮಹಬೂಬ್ ಜಿಲಾನ್ ಸೇರಿದಂತೆ ಮತ್ತಿತರರು ಇದ್ದರು.






## ಸಂಚಲನ ಮೂಡಿಸಿದ ಮುಂದಿನ ಸಿಎಂ ಸತೀಶ್‌ಜಾರಕಿಹೊಳಿ ಬರಹ

» **ಚಳ್ಳಕೆರೆ**

ತಾಲ್ಲೂಕಿನ ನಾಯಕನಹಟ್ಟಿಯ ಗುರು ತಿಪ್ಪೇರುದ್ರಸ್ವಾಮಿ ಜಾತ್ರೆಯಲ್ಲಿ ಸತೀಶ್ ಜಾರಕಿಹೊಳಿಯವರ ಅಭಿಮಾನಿಗಳು ಕಟ್ಟಿದ ಬ್ಯಾನರ್‌ನಲ್ಲಿ ಮುಂದಿನ ಮುಖ್ಯಮಂತ್ರಿ ಸತೀಶ್‌ಜಾರಕಿಹೊಳಿ ಎಂಬ ಬರಹ ರಾಜಕೀಯ ವಲಯದಲ್ಲಿ ಮತ್ತೆ ಸಂಚಲನ ಮೂಡಿದೆ. ಪ್ರತಿವರ್ಷವೂ ಜಾತ್ರಾ ಸಂದರ್ಭದಲ್ಲಿ ಅಭಿಮಾನಿಗಳು ತಿಪ್ಪೇರುದ್ರಸ್ವಾಮಿ ಜಾತ್ರೆಗೆ ಆಗಮಿಸುವ ಭಕ್ತರಿಗೆ ಸ್ವಾಗತಕೋರುವುದು ವಾಡಿಕೆ. ಆದರೆ, ಈ ಬಾರಿ ವಿಶೇಷವಾಗಿ ಸತೀಶ್‌ಜಾರಕಿಹೊಳಿ ಅಭಿಮಾನಿಗಳು ಕಟ್ಟಿದ ಬ್ಯಾನರ್‌ನ ಬರಹ ರಾಜಕೀಯ ಕ್ಷೇತ್ರದಲ್ಲಿ ಚರ್ಚೆಗೆ ಗ್ರಾಸವಾಗಿದೆ. ಶ್ರೀಸ್ವಾಮಿಯ ರಥ ಆರಂಭವಾಗುವ ಸಂದರ್ಭದಲ್ಲೇ ನೂರಾರು ಅಭಿಮಾನಿಗಳ






ಕೈಯಲ್ಲಿ ಸತೀಶ್‌ಜಾರಕಿಹೊಳಿಯವರ ಭಾವಚಿತ್ರ ಹಿಡಿದು ಮುಂದಿನ ಮುಖ್ಯಮಂತ್ರಿ ಸತೀಶ್‌ಜಾರಕಿಹೊಳಿ ಎಂದು ಘೋಷಣೆಗಳು ಕೂಗಿದ್ದು ಕಂಡುಬಂತು. ನಾಯಕನಹಟ್ಟಿ ಜಾತ್ರೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ, ಮೊಳಕಾಲ್ಮೂರು ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ, ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಚಿತ್ರದುರ್ಗ ಶಾಸಕ ವೀರೇಂದ್ರ(ಪಪ್ಪಿ), ಮಾಜಿ ಸಚಿವ ಬಿ.ಶ್ರೀರಾಮುಲು ಸೇರಿದಂತೆ ಅನೇಕ ಗಣ್ಯರು ಆಗಮಿಸಿದ್ದರು. ಆದರೆ, ಕಾಂಗ್ರೆಸ್ ಪಕ್ಷದ ಯಾವ ನಾಯಕರೂ ಈ ಬಗ್ಗೆ ಎಲ್ಲೂ ಚಕಾರವೆತ್ತಲಿಲ್ಲ. ಜಾತ್ರೆಗೆ ಬಂದ ಭಕ್ತಾಧಿಗಳಿಗೆ ಮಾತ್ರ ಈ ಬ್ಯಾನರ್‌ಗಳು ಆಚ್ಚರಿ ಮೂಡಿಸಿವೆ.

## ಫಾಸ್ಟ್ ನ್ಯೂಸ್

### ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಕೌಲಾಪೂರೆ ಅವರಿಂದ ಅಹವಾಲು ಸ್ವೀಕಾರ

» ದಾವಣಗೆರೆ

ದಾವಣಗೆರೆ ವಿಭಾಗದ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್ ಕೌಲಾಪೂರೆ ಅವರು ದಾವಣಗೆರೆ ಪ್ರವಾಸಿ ಮಂದಿರಲ್ಲಿ ಪೊಲೀಸ್ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ಮಾ.19 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30 ರ ವರೆಗೆ ಸಾರ್ವಜನಿಕರ ಅಹವಾಲು ಸ್ವೀಕಾರಿಸುವರು. ಸಾರ್ವಜನಿಕರು ವಿವಿಧ ಇಲಾಖೆಗಳಿಗೆ ಸಲ್ಲಿಸಿದ ಅರ್ಜಿಗಳನ್ನು ವಿಲೇ ಮಾಡದೇ ಬಾಕಿ ಇಟ್ಟಿದಲ್ಲಿ ಅಂತಹ ದೂರುಗಳನ್ನು ಸಲ್ಲಿಸಬಹುದೆಂದು ತಿಳಿಸಿದ್ದಾರೆ.

### ದಾವಣಗೆರೆ: ನೀರು ಸರಬರಾಜು ವ್ಯತ್ಯಯ

» ದಾವಣಗೆರೆ

ಬೇಸಿಗೆ ಸಮಯವಾಗಿರುವುದರಿಂದ ವಿದ್ಯುತ್‌ನ ಹೆಚ್ಚಿನ ಬೇಡಿಕೆ ಇರುವುದರಿಂದ, ವಿದ್ಯುತ್ ಸರಬರಾಜುವಿನಲ್ಲಿ ವ್ಯತ್ಯಯ ಉಂಟಾಗುತ್ತಿರುವುದರಿಂದ, ನಿರಂತರ ಕುಡಿಯುವ ನೀರು ಸರಬರಾಜುವಿನ ನೀರು ಶುದ್ದೀಕರಣ ಘಟಕ ಹಾಗೂ ತುಂಗಭದ್ರಾ ನದಿಯಿಂದ ನೀರು ಸರಬರಾಜು ಮಾಡಲಾಗುತ್ತಿರುವ, ಕವಲೆತ್ತು ಗ್ರಾಮದ ಹತ್ತಿರವಿರುವ ಜಾಕ್‌ವೆಲ್ ಪಂಪ್‌ಹೌಸ್‌ನಲ್ಲಿ ವಿದ್ಯುತ್ ಸರಬರಾಜುವಿನಲ್ಲಿ ಅಡಚಣೆಯಾಗುತ್ತಿದೆ. ನಗರದ ಗ್ರಾಮ ದೇವತೆ ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ ನೀರಿನ ಬೇಡಿಕೆ ಹೆಚ್ಚಾಗುವುದರಿಂದ ಸಾಧ್ಯವಾದಷ್ಟು ಶುದ್ದೀಕರಿಸಿದ ನೀರನ್ನು ಅಗತ್ಯಕ್ಕೆ ತಕ್ಕಂತೆ ಸಂಗ್ರಹಣೆ ಮಾಡಿಕೊಳ್ಳಬೇಕೆಂದು ಹರಿಹರ ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.

### ಮಾರ್ಚ್ 24ರಂದು ಕೆಡಿಪಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ

» ಚಿತ್ರದುರ್ಗ

ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇದೇ ಮಾರ್ಚ್ 24ರಂದು ಬೆಳಿಗ್ಗೆ 11ಕ್ಕೆ ಕೆಡಿಪಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ಆಯೋಜಿಸಲಾಗಿದೆ. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ತಿಳಿಸಿದ್ದಾರೆ.

### ಅಗ್ನಿವೀರ್ ನೇಮಕಾತಿ ಪರೀಕ್ಷೆಗೆ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನ ಅಗ್ನಿಪಥ್ ಯೋಜನೆಯಡಿ ಅಗ್ನಿವೀರ್ ನೇಮಕಾತಿ ಪರೀಕ್ಷೆಗೆ ಬಾಗಲಕೋಟೆ, ಗದಗ, ವಿಜಯಪುರ, ಧಾರವಾಡ, ಉತ್ತರ ಕನ್ನಡ, ಉಡುಪಿ, ದಾವಣಗೆರೆ, ಹಾವೇರಿ, ಚಿಕ್ಕಮಂಗಳೂರು ಮತ್ತು ಶಿವಮೊಗ್ಗ ಜಿಲ್ಲೆಗಳ ಅವಿವಾಹಿತ ಪುರುಷ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನೋಂದಣಿಯು ಏಪ್ರಿಲ್ 10 ರವರೆಗೆ ಇರುತ್ತದೆ. ನೋಂದಣಿ ಪೋರ್ಟಲ್ WWW. JOININDINARMY. NIC.IN ಹಾಗೂ ಆನ್ ಲೈನ್ ಪರೀಕ್ಷೆಯು ಜೂನ್ 2025 ರಲ್ಲಿ ನಡೆಯುವ ಸಾಧ್ಯತೆ ಇದ್ದು, ಪರೀಕ್ಷೆಯ ದಿನಾಂಕವನ್ನು ನಂತರ ತಿಳಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮಂಗಳೂರು ಸೇನಾ ನೇಮಕಾತಿ ಕಚೇರಿ ದೂ.ಸಂ:0824-2951279 ಹಾಗೂ ಇ-ಮೇಲ್ aromangalore2021@gmail.com ಸಂಪರ್ಕಿಸಲು ಇಲಾಖೆಯ ಉಪನಿರ್ದೇಶಕರಾದ ಡಾ.ಸಿ.ಎ ಹಿರೇಮಠ ತಿಳಿಸಿದ್ದಾರೆ.

### ಶುಲ್ಕ ಮರುಪಾವತಿ : ಮಾ.30 ರವರೆಗೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

» ಚಿತ್ರದುರ್ಗ

2023-24ನೇ ಸಾಲಿನಲ್ಲಿ ಕೆಲ ಸ್ನಾತಕೊತ್ತರ ಹಾಗೂ ವೃತ್ತಿಪರ ಪದವಿ ಕೋರ್ಸ್‌ಗಳ ಕೌನ್ಸಿಂಗ್ ತಡವಾಗಿ ಪ್ರಾರಂಭವಾಗಿದ್ದರಿಂದ, ಕಳೆದ ಶೈಕ್ಷಣಿಕ ವರ್ಷದ ಫಲಿತಾಂಶ ಹೊರ ಬೀಳುವುದು ತಡವಾಗಿದೆ. ಈ ಹಿನ್ನಲೆಯಲ್ಲಿ ಹಿಂದುಳಿದ ವರ್ಗಗಳು ಮತ್ತು ಪ್ರವರ್ಗ-1ರ ಅಲೆಮಾರಿ, ಅರೆಅಲೆಮಾರಿ ವಿದ್ಯಾರ್ಥಿಗಳ ಶುಲ್ಕ ಮರು ಪಾವತಿ ಅರ್ಜಿ ಸಲ್ಲಿಕೆ ಅವಧಿಯನ್ನು ಮಾರ್ಚ್ 30 ವರೆಗೆ ವಿಸ್ತರಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ವೆಬ್‌ಸೈಟ್ https://ssp.postmatric.karnataka.gov.in/ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸುವ ವಿಧಾನ ಹಾಗೂ ಇತರೆ ಮಾಹಿತಿಗಾಗಿ ವೆಬ್‌ಸೈಟ್ https://bcwd.karnataka.gov.in ಭೇಟಿ ನೀಡಬಹುದು. ಇಲಾಖೆ ಸಹಾಯವಾಣಿ 8050770005 ಹಾಗೂ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಸಹಾಯವಾಣಿ 1902ಗೆ ಕರೆ ಮಾಡಬಹುದು. bcwdhelpline@gmail.com ಮತ್ತು postmatrichelp@karnataka.gov.in ಇಮೇಲ್ ಮಾಡುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

# ದೇಶಾಭಿವೃದ್ಧಿಯಲ್ಲಿ ಯುವ ಜನರ ಪಾತ್ರ ಬಹಳ ಅಗತ್ಯ: ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್

» ದಾವಣಗೆರೆ



ಯುವಕರು ದೇಶದ ಅಭಿವೃದ್ಧಿಯಲ್ಲಿ ಪ್ರಮುಖವಾಗಿದ್ದು ನಿಮ್ಮ ಕೆಲಸದ ಜೊತೆಗೆ ಕುಟುಂಬದ ಜವಾಬ್ದಾರಿಯನ್ನು ನಿಭಾಯಿಸುವ ಮೂಲಕ ಸಮಾಜಕ್ಕೆ ಒಳ್ಳೆಯ ಕೊಡುಗೆ ನೀಡಬೇಕು ಎಂದು ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಹಾಗೂ ಜಿಲ್ಲಾ ಕೌಶಲ್ಯ ಮಿಷನ್ ಇವರ ಸಹಯೋಗದಲ್ಲಿ ಸರ್ಕಾರಿ ಐ.ಟಿ.ಐ ಕಾಲೇಜು ಆವರಣದಲ್ಲಿ ಏರ್ಪಡಿಸಲಾದ ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳವನ್ನು ಉದ್ಘಾಟಿಸಿ ಮಾತನಾಡಿದರು. ಬೃಹತ್ ಉದ್ಯೋಗ ಮೇಳದಲ್ಲಿ ಸುಮಾರು 69 ಪ್ರಮುಖ ಕಂಪನಿಗಳು ಭಾಗವಹಿಸಿವೆ. ಇದರಲ್ಲಿ ಐಟಿಐಗೆ ಸಂಬಂಧಿಸಿದ 11 ಕಂಪನಿಗಳು ಭಾಗವಹಿಸಿವೆ. ಉದ್ಯೋಗಕ್ಕಾಗಿ ಆನ್‌ಲೈನ್‌ನಲ್ಲಿ 5413 ಜನ ಅಭ್ಯರ್ಥಿಗಳು, ಆಫ್‌ಲೈನ್‌ನಲ್ಲಿ 2500 ಸೇರಿ ಒಟ್ಟು 7913 ಅಭ್ಯರ್ಥಿಗಳು ನೋಂದಾಯಿಸಿಕೊಂಡಿರುವರು,

ಇದರಲ್ಲಿ 2097 ಪುರುಷರು, 2427 ಮಹಿಳೆಯರು, 395 ಅಂಗವಿಕಲರು, 13 ತೃತೀಯ ಲಿಂಗದ ಅಭ್ಯರ್ಥಿಗಳು ನೋಂದಾಯಿಸಿದ್ದಾರೆ. ಇದರಲ್ಲಿ ಸುಮಾರು 15 ಅಭ್ಯರ್ಥಿಗಳಿಗೆ ಸಾಂಕೇತಿಕವಾಗಿ ಉದ್ಯೋಗದ ನೇಮಕಾತಿ ಆದೇಶ ನೀಡಿದರು. ಅಭ್ಯರ್ಥಿಗಳ ಕುರಿತು ಸಂಸದರು ಮಾತನಾಡಿ ಕಂಪನಿಗಳು ನಿಮ್ಮನ್ನು ಆಯ್ಕೆ ಮಾಡಿಕೊಂಡಿವೆ, ಆದರೆ ನೀವು ಆ ಕೆಲಸಕ್ಕೆ ಹೋಗುವುದೇ ಇಲ್ಲ. ಉದ್ಯೋಗ ಪ್ರಮುಖವಾಗಿದ್ದು ಸೇವೆ ಮಾಡಿದ ನಂತರ ಅನುಭವದ ಮೇಲೆ ಇತರೆ ಕಂಪನಿಗಳಿಗೂ ತೆರಳುವ ಅವಕಾಶವಿರುತ್ತದೆ.

ಯುವಕರು ವಿದ್ಯಾಭ್ಯಾಸದ ಜೊತೆಗೆ ಉದ್ಯೋಗ ಕೈಗೊಳ್ಳುವ ಮೂಲಕ ಆರ್ಥಿಕಾಭಿವೃದ್ಧಿ ಯಲ್ಲಿ ಕೈಜೋಡಿಸಬೇಕು. ಗ್ಯಾರಂಟಿ ಯೋಜನೆಯಲ್ಲಿ ಒಂದಾದ ಯುವನಿಧಿ ಯೋಜನೆಗೆ ಜಿಲ್ಲೆಯಲ್ಲಿ 6226 ಪದವೀಧರರು, 119 ಡಿಪ್ಲೋಮಾ ವಿದ್ಯಾರ್ಥಿಗಳಿದ್ದು, ಒಟ್ಟು 6345 ನಿರುದ್ಯೋಗಿಗಳು ಯುವನಿಧಿ ಯೋಜನೆಯ ಉಪಯೋಗ ಪಡೆದುಕೊಳ್ಳುತ್ತಿದ್ದಾರೆ ಎಂದರು. ದಾವಣಗೆರೆ ಆರಾಧ್ಯ ಸ್ಟೀಲ್ ಕಂಪನಿಯವರಿಗೆ 100 ಜನ ಕೆಲಸಗಾರರ ಅವಶ್ಯಕತೆ ಇದ್ದು, ಯಾರಿಗಾದರೂ ಆಸಕ್ತಿ ಇದ್ದರೆ ಕೆಲಸ ನಿರ್ವಹಿಸಬಹುದು. ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಕಾರ್ಯಕ್ರಮ ಹಾಕಿಕೊಂಡು ಯುವ ಜನರಿಗೆ ಅನುಕೂಲ ಮಾಡಿಕೊಡಲಾಗುತ್ತದೆ ಎಂದರು. ರೆಡ್ ಕ್ರಾಸ್ ಸಂಸ್ಥೆಯವರಿಂದ ರಕ್ತದಾನ ಶಿಬಿರ ಏರ್ಪಡಿಸಿದ್ದು, 18 ರಿಂದ 45 ವರ್ಷ ವಯಸ್ಸಿನವರು ರಕ್ತ ದಾನ ಮಾಡಬಹುದೆಂಬ ಮಾಹಿತಿ ನೀಡಿದರು.

ಪ್ಲಾಸ್ಟಿಕ್ ವಸ್ತುಗಳನ್ನು ನಿಷೇಧ ಮಾಡುವುದಕ್ಕಾಗಿ ಕ್ರಷ್ ಮಿಷನ್‌ನ್ನು ಉದ್ಘಾಟಿಸಿದರು.

ಎಸ್.ಎಸ್.ಕೇರ್ ಟ್ರಸ್ಟ್: ಸುಮಾರು 22000 ಜನರಿಗೆ ಡಯಾಲಿಸಸ್‌ನ್ನು ಉಚಿತವಾಗಿ ಮಾಡಲಾಗಿದೆ. ಸುಕ್ಷೇಮ ಕಾರ್ಯಕ್ರಮವನ್ನು ಏರ್ಪಡಿಸಿದ್ದು, ಇದರ ಉದ್ದೇಶ ಪಿಯುಸಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನೀಟ್ ಮತ್ತು ಸಿಇಟಿ ಕೋಚಿಂಗ್ ನೀಡಲಾಗಿದ್ದು, ಇದರಲ್ಲಿ 200 ಜನ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ ಅವರಿಗೆ ಉಚಿತವಾಗಿ ಟ್ಯೂಷನ್ ವ್ಯವಸ್ಥೆ, ಹಾಸ್ಟೆಲ್ ವ್ಯವಸ್ಥೆ ಮಾಡಲಾಗುವುದು.

ತಾಲ್ಲೂಕು ಮಟ್ಟದಲ್ಲಿ ಸಿವಿಲ್ ಸರ್ವಿಸ್ ಅಭ್ಯರ್ಥಿಗಳಿಗೆ ಪರೀಕ್ಷೆ ನಡೆಸಿ ಅವರಿಗೆ ಏಪ್ರಿಲ್ ತಿಂಗಳಿಂದ ವಿಶ್ವವಿದ್ಯಾನಿಲಯದಲ್ಲಿ ಉಚಿತವಾಗಿ ತರಬೇತಿ ನೀಡಲಾಗುವುದು ಎಂದರು. ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷರಾದ ಶಿವಕಾಂತನಾಯ್ಕ ಮಾತನಾಡಿ ಇದು ಆಶಾಕಿರಣ ದಿನ, ಯುವ ಜನತೆಯ ಭವಿಷ್ಯವನ್ನು ನಿರ್ಮಿಸುವ ದಿನ, ಹೊಸ ಬದುಕಿನ ಯುವ ಜನತೆಗೆ ಇದು ಯುವಕರ ಭವಿಷ್ಯವನ್ನು ಕಲ್ಪಿಸಲಾಗಿದೆ. ಉದ್ಯೋಗದಾತರಿಗೂ ಉದ್ಯೋಗಕಾಂಕ್ಷೆಗಳಿಗೆ ಒಂದೇ ಸೂರಿನಡಿ ತಂದು ಯುವಕರಿಗೆ ಬೇರೆ ಬೇರೆ ವಲಯಗಳಲ್ಲಿ ಅವಕಾಶ ಕಲ್ಪಿಸಿಕೊಡಲಾಗಿದೆ ಎಂದರು. ಯುವಕರು ವಿದ್ಯೆ ಜೊತೆಗೆ ಕೌಶಲ್ಯಾಭಿವೃದ್ಧಿ ಹೆಚ್ಚಿಸಲು ತರಬೇತಿಯನ್ನು ನಮ್ಮ ಕೌಶಲ್ಯಾಭಿವೃದ್ಧಿ ನಿಗಮ ನೀಡುತ್ತಿದೆ. ಇಬ್ಬರು ಮಹಿಳೆಯರಿಗೆ ಜಲಜೀವನ್ ಮಿಷನ್ ತರಬೇತಿ ನೀಡಿ ಅವರನ್ನು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅವರಿಗೆ ಕೆಲಸ ನಿರ್ವಹಿಸಲು ಅವಕಾಶ ನೀಡಲಾಗಿದೆ ಎಂದರು. ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಪ್ರಸ್ತಾವಿಕವಾಗಿ ಮಾತನಾಡಿದರು. ಅಂಗವಿಕಲ ಅಭ್ಯರ್ಥಿಗಳಿಗೆ ಟೂಲ್ ಕಿಟ್ ವಿತರಣೆ ಮಾಡಲಾಯಿತು. ಆತ್ಮ ನಿರ್ಬರ್ ಯೋಜನೆಯಡಿ ಸಹಾಯಧನವನ್ನು ನೀಡಲಾಯಿತು. ಹಾಗೂ ಸುಮಾರು ರೂ.31 ಕೋಟಿ ಹಣವನ್ನು ಬೀದಿಬದಿ ವ್ಯಾಪಾಸ್ಥರಿಗೆ ಸಹಾಯಧನವನ್ನು ನೀಡಲಾಯಿತು. ಉದ್ಯೋಗ ಮೇಳವು ಹದಡಿ ರಸ್ತೆಯಲ್ಲಿರುವ ಸರ್ಕಾರಿ ಐಟಿಐ ಕಾಲೇಜು ಮತ್ತು ಬಾಪೂಜಿ ತಾಂತ್ರಿಕ ಮಹಾವಿದ್ಯಾಲಯ ಈ ಎರಡು ಕಡೆ ನಡೆಯಿತು. ಬಿಐಟಿಯಲ್ಲಿ ಬಿಇ ಹಾಗೂ ಎಂಬಿಎ ಪದವಿ ಪಡೆದ ಅಭ್ಯರ್ಥಿಗಳ ಆಯ್ಕೆ ನಡೆದರೆ, ಐಟಐ ಕಾಲೇಜಿನಲ್ಲಿ ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿಪ್ಲೊಮಾ ಹಾಗೂ ಪದವಿ, ಸ್ನಾತಕೋತ್ತರ ಪದವಿ ಪಡೆದವರಿಗೆ ಆಯ್ಕೆ ಪ್ರಕ್ರಿಯೆ ನಡೆಸಲಾಯಿತು. ಮೇಳದಲ್ಲಿ ಹಲವು ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಪ್ರಸ್ತುತ ಜಿಲ್ಲೆಯಲ್ಲಿ ಏರ್ಪಡಿಸಲಾದ ಉದ್ಯೋಗ ಮೇಳವು ಅನೇಕ ನಿರುದ್ಯೋಗಿಗಳಿಗೆ ವಿದ್ಯಾವಂತರಿಗೆ ತುಂಬಾ ಅನುಕೂಲವಾಗಿದೆ ಎಂದರು.

ವ್ಯವಸ್ಥಿತ ನೋಂದಣಿ ವ್ಯವಸ್ಥೆ: ನಗರದ ಹದಡಿ ರಸ್ತೆಯ ಸರ್ಕಾರಿ ಐಟಿಐ ಕಾಲೇಜಿನಲ್ಲಿ ನಡೆದ ಉದ್ಯೋಗ ಮೇಳದಲ್ಲಿ ಅಗತ್ಯ ಮೂಲ ಸೌಲಭ್ಯದೊಂದಿಗೆ ಪ್ರವೇಶ ದಾರದಲ್ಲಿಯೇ ಪುರುಷರಿಗೆ, ಮಹಿಳೆಯರಿಗೆ, ತೃತೀಯಲಿಂಗಿಗಳಿಗೆ ಹಾಗೂ ವಿಶೇಷ ಚೇತನರಿಗೆ ಪ್ರತ್ಯೇಕವಾಗಿ ನಾಲ್ಕು ನೋಂದಣಿ ಕೇಂದ್ರಗಳನ್ನು ಸ್ಥಾಪಿಸುವುದರೊಂದಿಗೆ ನೊಂದಣಿ ಪ್ರಕ್ರಿಯೆಯನ್ನು ಅಚ್ಚುಕಟ್ಟಾಗಿ ಆಯೋಜನೆ ಮಾಡಲಾಗಿತ್ತು. ನೊಂದಣಿ ಪ್ರಕ್ರಿಯೆಯಲ್ಲಿ ಸುಮಾರು 69 ವಿವಿಧ ಖಾಸಗಿ ಕಂಪನಿಗಳು ಭಾಗಿಯಾಗಿದ್ದು, ಆಫ್‌ಲೈನ್ ನಲ್ಲಿ ಐದು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ನೊಂದಣಿಯಾಗಿದ್ದಾರೆ.

ಚನ್ನಗಿರಿ ತಾಲೂಕಿನ ಸತೀಶ್ (40ವರ್ಷ) ಎಂಬುವವರು ಪ್ರತಿಕ್ರಿಯಿಸಿ, 2005ರಲ್ಲಿ ಬಿ.ಎ ಪದವಿ ಪಡೆದು ಶ್ರೀ ರಾಮ ಫೈನಾನ್ಸ್ ಖಾಸಗಿ ಕಂಪನಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದು, ಮೇಳದಲ್ಲಿ ಕೆಲವು ಕಂಪನಿಗಳಿಗೆ ಸಂದರ್ಶನ ನೀಡಿದ್ದೇನೆ.

ಜಿಲ್ಲೆಯ ಜಗಳೂರು ತಾಲೂಕಿನ ದೊಡ್ಡಬೊಮ್ಮನಹಳ್ಳಿಯ ಪೂಜಾ ಡಿ. ಇವರು 2023 ರಲ್ಲಿ ಬಿ.ಇ ಸಿವಿಲ್ ಇಂಜಿನಿಯರಿಂಗ್ ಪದವೀಧರೆಯಾಗಿದ್ದು, ಸ್ಪರ್ಧಾತ್ಮಕ ಪರೀಕ್ಷೆಗೆ ತಯಾರಿ ನಡೆಸುತ್ತಿದ್ದೇನೆ. ಈ ಮೇಳದಲ್ಲಿ ಸುಮಾರು 6 ವಿವಿಧ ಕಂಪನಿಗಳಿಗೆ ಸಂದರ್ಶನ ನೀಡಿದ್ದು , ಪುಣೆ ಅಥವಾ ಬೆಂಗಳೂರಿನಲ್ಲಿ ಉದ್ಯೋಗಾವಕಾಶ ಸಿಗುವ ನಿರೀಕ್ಷೆ ಇದೆ ಎಂದು ಆಶಯ ವ್ಯಕ್ತಪಡಿಸಿದರು.

ಜಗಳೂರು ತಾಲ್ಲೂಕಿನ ವಿಶೇಷ ಚೇತನ ವ್ಯಕ್ತಿ ತಿಪ್ಪೇಸ್ವಾಮಿ 2020 ರಲ್ಲಿ ಬಿ.ಎ ಪದವಿ ಪಡೆದಿದ್ದಾರೆ. ಪದವಿ ನಂತರ ಏರ್ಟೆಲ್ ಟೆಲಿಕಾಂ ಕಂಪನಿ ಮತ್ತು ಇನ್ನಿತರೆ ಖಾಸಗಿ ಕಚೇರಿಗಳಲ್ಲಿ ಕಾರ್ಯನಿರ್ವಹಿಸಿದ್ದು. ವಿದ್ಯಾಭ್ಯಾಸಕ್ಕೆ ತಕ್ಕ ಉದ್ಯೋಗ ಸಿಗಬಹುದೆಂದು ಮೇಳದಲ್ಲಿ ಭಾಗಿಯಾಗಿರುವುದಾಗಿ ಹೇಳಿದರು.

ವಿಜಯನಗರ ಜಿಲ್ಲೆಯ ಹರಪನಹಳ್ಳಿ ತಾಲೂಕಿನ ಸಿದ್ದೇಶ್ ಎಂಬುವವರು 2023ರಲ್ಲಿ ಪಿಯುಸಿ ನಂತರ ಬಿ.ಎ ಪದವಿಯನ್ನು ಬಡತನ, ಮನೆ ನಿರ್ವಹಹಣೆ ಕಾರಣಕ್ಕೆ ವಿದ್ಯಾಭ್ಯಾಸವನ್ನು ಮೊಟಕುಗೊಳಿಸಿ ಸನ್ನೇರಾ ಖಾಸಗಿ ಕಂಪನಿಯಲ್ಲಿ 2ವರ್ಷಗಳಿಂದ ಕೆಲಸ ಮಾಡುತ್ತಿದ್ದೇನೆ. ಸ್ಥಳೀಯವಾಗಿ ಉದ್ಯೋಗ ಮಾಡುವ ಇಚ್ಛೆಯಿಂದ ಮೇಳದಲ್ಲಿ ಪಾಲ್ಗೊಂಡಿದ್ದೇನೆ.

ಜಿಲ್ಲೆಯ ಸ್ಥಳೀಯ ನಿವಾಸಿ ದಯಾನ ತೃತೀಯ ಲಿಂಗಿಯಾಗಿದ್ದು, ಪಿಯುಸಿ ವಿದ್ಯಾರ್ಹತೆ ಹೊಂದಿದ್ದು, ಮೇಳದಲ್ಲಿ ನಮಗೂ ಅವಕಾಶ ನೀಡಿದ್ದು ಖುಷಿಯಾಗಿದೆ. ಅಲ್ಲದೇ ಮುಂದೆ ನಮಗೂ ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ನೀಡುವ ಭರವಸೆಯನ್ನು ನೀಡಿದ್ದಕ್ಕಾಗಿ ಜಿಲ್ಲಾಡಳಿತಕ್ಕೆ ಧನ್ಯವಾದ ತಿಳಿದರು.

ಸ್ಥಳೀಯ ಕಂಪನಿಗಳಿಗೆ ಅವಕಾಶ ನೀಡದೆ ಹೊರ ರಾಜ್ಯ, ಜಿಲ್ಲೆಗಳಿಗೆ ಅವಕಾಶ ನೀಡಿದೆ. ಸ್ಥಳೀಯ ಕಂಪನಿಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರೆ, ಇನ್ನಷ್ಟು ಉಪಯೋಗ ವಾಗುತ್ತಿತ್ತು.

ಸ್ಥಳೀಯ ನಿವಾಸಿ ಸುಷ್ಮಿತಾ ಬಿ.ಸಿ.ಎ ಪದವೀಧರೆಜಿಲ್ಲೆಯ ಐಗೂರು ನಿವಾಸಿ ಶಿವಕುಮಾರ್ ಕೆ.ಹೆಚ್. 2015ರಲ್ಲಿ ಬಿಕಾಂ ಪದವಿ ಪಡೆದು 7 ವರ್ಷಗಳ ಕಾಲ ಲ್ಯಾಬ್ ಟೆಕ್ನಿಶಿಯನ್ ಆಗಿ ಕೆಲಸ ಮಾಡುತ್ತಿದ್ದೇನೆ. ಸ್ಥಳೀಯ ಮಟ್ಟದಲ್ಲಿ ಮೇಳ ಆಯೋಜನೆ ಮಾಡಿರುವುದು ಸಂತೋಷದ ಸಂಗತಿ.

ರಾಜ್ಯ ತಾಂಡ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಯದೇವನಾಯ್ಕ, ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಆಸಗೋಡು ಜಯಸಿಂಹ, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಜಿ.ಪಂ ಸಿಇಓ ಡಾ.ಸುರೇಶ್.ಬಿ.ಇಟ್ನಾಳ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಶಿವಕುಮಾರಮಲ್ಲಾಡದ, ಐಟಿಐ ಕಾಲೇಜಿನ ಪ್ರಾಚಾರ್ಯರರಾದ ಏಕನಾಥ.ಎನ್, ಆಯುಕ್ತೆ ರೇಣುಕಾ ಉಪಸ್ಥಿತರಿದ್ದರು.

## ಐತಿಹಾಸಿಕ ಬಾಣದ ರಂಗನಾಥಸ್ವಾಮಿ ಸ್ಮಾರಕ ಸ್ವಚ್ಛತೆ

» ಚಿತ್ರದುರ್ಗ



ಐತಿಹಾಸಿಕ ಬಾಣದ ರಂಗನಾಥಸ್ವಾಮಿ ಸ್ಮಾರಕ ಸ್ವಚ್ಛತೆಕಾಲೇಜ್ ವಿದ್ಯಾರ್ಥಿಗಳಿಗೆಪರಂಪರೆಅರಿವು ಕಾಯಕ್ರಮ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಸಹಾಯಕ ನಿರ್ದೇಶಕರ ಕಛೇರಿ ಸರ್ಕಾರಿ ವಸ್ತುಸಂಗ್ರಹಾಲಯ, ಚಿತ್ರದುರ್ಗ ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜ್ ಹೊಸದುರ್ಗದ ಇತಿಹಾಸ ಪರಂಪರೆ ಕೂಟ ಹಾಗೂ ಎನ್.ಎಸ್.ಎಸ್. ಘಟಕದ ವತಿಯಿಂದ ಹೊಸದುರ್ಗ ತಾಲ್ಲೂಕು ಮತ್ತೋಡು ಗ್ರಾಮದ ಶ್ರೀ ಬಾಣದ ರಂಗನಾಥಸ್ವಾಮಿ ದೇವಾಲಯ ಸ್ಮಾರಕವನ್ನು ಸ್ವಚ್ಛತೆ ಮತ್ತು ವಿದ್ಯಾರ್ಥಿಗಳಿಗೆ ಹಾಗೂ ಗ್ರಾಮಸ್ಥರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಇತ್ತೀಚೆಗೆ ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಕಾಲೇಜಿನ ಇತಿಹಾಸ ಪರಂಪರೆ ಕೂಟದ ಮುಖ್ಯಸ್ಥರಾದ ಡಾ. ನಾಗರಾಜ್ ಮಾತನಾಡಿ ಹೊಸದುರ್ಗ ತಾಲ್ಲೂಕಿನ ಇತಿಹಾಸಕ್ಕೆ ಮತ್ತೋಡು ಪಾಳೆಗಾರರ ಕೊಡುಗೆ ಅಪಾರವಾಗಿದ್ದು ಪಾಳೆಗಾರರ ಕಾಲದಲ್ಲಿ ನಿರ್ಮಾಣವಾದ ಎಲ್ಲಾ ಸ್ಮಾರಕಗಳನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಇದರ ಇತಿಹಾಸವನ್ನು ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು ಎಂದರು

ಪುರಾತತ್ವಸಂಗ್ರಹಾಲಯಗಳುಮತ್ತುಪರಂಪರೆ ಇಲಾಖೆಯ ಸಹಾಯಕ ನಿರ್ದೇಶಕರಾದ ಪ್ರಹ್ಲಾದ್, ಜಿ ಮಾತನಾಡಿ ಹೊಸದುರ್ಗ ತಾಲ್ಲೂಕಿನಲ್ಲಿ ಜಿಲ್ಲೆಯಲ್ಲಿಯೇ ಅತಿ ಹೆಚ್ಚು ಸ್ಮಾರಕ ಶಿಲಾಶಾಸನ, ವೀರಮಾಸ್ತಿಗಲ್ಲುಗಳು, ಕೋಟೆ ಇನ್ನಿತರ ಪ್ರಾಚ್ಯಾವಶೇಷಗಳಿವೆ ಇಲಾಖೆವತಿಯಿಂದ ಪ್ರಾಚ್ಯಾವಶೇಷಗಳ ಸರ್ವೆ ಕಾರ್ಯ ನಡೆಸಲಾಗುತ್ತಿದೆ ಸ್ಮಾರಕಗಳ ಸಂರಕ್ಷಣೆಗೆ ಯುವಕರು ವಿದ್ಯಾರ್ಥಿಗಳು ಮತ್ತು ಗ್ರಾಮಸ್ಥರು ಕೈಗೂಡಿಸಬೇಕೆಂದು ತಿಳಿಸಿದರು.

## ನೋಡುಗರ ಕಣ್ಮನ ಸೆಳೆದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ



» ದಾವಣಗೆರೆ

ನಗರದ ಹೈಸ್ಕೂಲ್ ಶಾಲಾ ಆವರಣದಲ್ಲಿ ಜಿಲ್ಲಾ ಪಂಚಾಯತ್, ರಾಷ್ಟ್ರೀಯ ಗ್ರಾಮೀಣಾಭಿವೃದ್ಧಿ ಜೀವನೋಪಾಯ ಅಭಿಯಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ "ಸಂಜೀವಿನಿ ಸ್ವ ಸಹಾಯ ಗುಂಪುಗಳ ಉತ್ಪಾದಿತ ಉತ್ಪನ್ನಗಳ ಜಿಲ್ಲಾ ಮಟ್ಟದ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ" ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಉದ್ಘಾಟಿಸಿದರು. ಮೇಳದಲ್ಲಿ ಜಿಲ್ಲೆಯ ಚನ್ನಗಿರಿ, ದಾವಣಗೆರೆ, ಹರಿಹರ, ಹೊನ್ನಾಳಿ, ಜಗಳೂರು ಹಾಗೂ ನ್ಯಾಮತಿ ತಾಲ್ಲೂಕಿನ ಒಟ್ಟು 39 ಸ್ವ-ಸಹಾಯ ಗುಂಪುಗಳ ಸದಸ್ಯರು ವಸ್ತು ಪ್ರದರ್ಶನದಲ್ಲಿ ಪಾಲ್ಗೊಂಡಿದ್ದರು. ವಸ್ತುಗಳ ಪ್ರದರ್ಶನ ಮತ್ತು ಮಾರಾಟಕ್ಕಾಗಿ ಸುಮಾರು 20ಕ್ಕೂ ಹೆಚ್ಚು ಮಳಿಗೆಗಳನ್ನು ಒದಗಿಸಲಾಗಿದ್ದು, ವಸ್ತುಪ್ರದರ್ಶನ ಮಳಿಗೆಗಳಿಗೆ ದಂಡು ದಂಡೋಪಾದಿಯಲ್ಲಿ ಜನರು ಬಂದ ದೃಶ್ಯ ಕಂಡುಬಂದಿತು. ಅದರಲ್ಲೂ ಪ್ರಮುಖವಾಗಿ ಜಿಲ್ಲೆಯ ವಿವಿಧ ಸ್ವ-ಸಹಾಯ ಗುಂಪುಗಳು ಉತ್ಪಾದಿಸಿರುವ ತಿಂಡಿ ತಿನಿಸುಗಳು, ಆಯುರ್ವೇದಿಕ್ ಹೇರ್ ಆಯಿಲ್, ಮಣ್ಣಿನಿಂದ ತಯಾರಿಸಿದ ವಸ್ತುಗಳು, ಕರ ಕುಶಲತೆಯಿಂದ ತಯಾರಿಸಿದ ವೈರ್ ಬ್ಯಾಗ್, ಜ್ಯೂಟ್ ಬ್ಯಾಗ್, ಅಲಂಕಾರಿಕ ವಸ್ತುಗಳು, ರಾಗಿ ಹಾಗೂ ಟೊಮಾಟೊದಿಂದ ಮಾಡಿದ ಹಪ್ಪಳ, ಉಪ್ಪಿನಕಾಯಿ, ಖಾರದ ಪುಡಿ ಹಾಗೂ ದೇಶಿಯವಾಗಿ ತಯಾರಿಸಿದ ಆಹಾರ ಪದಾರ್ಥಗಳು ಸೇರಿದಂತೆ ವಿವಿಧ ಬಗೆಯ ಉತ್ಪನ್ನಗಳು ನೋಡುಗರ ಕಣ್ಮನ ಸೆಳೆಯಿತು. ಮೇಳವನ್ನು ವೀಕ್ಷಿಸಿದ ಎಸ್ಪಿ ಉಮಾ ಪ್ರಶಾಂತ್ ತಮಗಿಷ್ಟವಾದ ಕರಕುಶಲ ವಸ್ತು, ಸಿಹಿ ತಿನಿಸು ಮುಂತಾದ ಉತ್ಪನ್ನಗಳನ್ನು ಖರೀದಿಸಿದರು. ಸ್ವ-ಸಹಾಯ ಸಂಘದ ಸದಸ್ಯರನ್ನು ಬೆಂಬಲಿಸಿದರು. ಅಷ್ಟೇ ಅಲ್ಲದೇ ಸಾರ್ವಜನಿಕರು ಕೂಡ ವಸ್ತುಪ್ರದರ್ಶನ ಮಳಿಗೆಗೆ ಭೇಟಿ ನೀಡಿ ಅಲ್ಲಿನ ಸಿಬ್ಬಂದಿಯಿಂದ ಮಾಹಿತಿ ಪಡೆದುಕೊಂಡು ಆಕರ್ಷಕ ಉತ್ಪನ್ನಗಳ ಖರೀದಿಯನ್ನೂ ಮಾಡಿದರು. ವಸ್ತುಪ್ರದರ್ಶನ ಇನ್ನೂ 4 ದಿನಗಳವರೆಗೂ ಮುಂದುವರೆಯಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಮಳಿಗೆಗಳಿಗೆ ಭೇಟಿ ನೀಡಿ ವೀಕ್ಷಿಸಿ, ಆಸಕ್ತರು ಖರೀದಿ ಮಾಡಬಹುದು.ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಸಿಇಒ ಸುರೇಶ್ ಬಿ ಇಟ್ನಾಳ್, ಯೋಜನಾ ನಿರ್ದೇಶಕಿ ರೇಷ್ಮ ಕೌಸರ್, ಜಿಲ್ಲಾ ಯೋಜನಾ ವ್ಯವಸ್ಥಾಪಕ ನಿರ್ದೇಶಕ ಬೋಜರಾಜ್, ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

# ಕಾನೂನು ಉಲ್ಲಂಘಿಸಿ ತೊಂದರೆಗೆ ಆಹ್ವಾನ ನೀಡಬೇಡಿ: ನ್ಯಾ.ಹೇಮಾ

» ಚಳ್ಳಕೆರೆ



ದೇಶದ ಪ್ರತಿಯೊಬ್ಬ ನಾಗರೀಕರೂ ನಮ್ಮ ಸಂವಿಧಾನ ನಮಗೆ ನೀಡಿರುವ ಎಲ್ಲಾ ಹಕ್ಕು ಮತ್ತು ಕರ್ತವ್ಯಗಳನ್ನು ಪಾಲಿಸಬೇಕು. ಜನರ ಒಳಿಗಾಗಿಯೇ ಕಾನೂನು ತನ್ನ ಕಾರ್ಯವನ್ನು ಮಾಡುತ್ತಾ ಬಂದಿದೆ. ಸಮಾಜದಲ್ಲಿ ಶಾಂತಿ ಕಾಪಾಡುವರ ಬಗ್ಗೆ ಕಾನೂನು ಗೌರವ ನೀಡುತ್ತದೆ. ಅದೇ ರೀತಿ ಅಶಾಂತಿ ಉಂಟು ಮಾಡುವವರ ವಿರುದ್ದ ಕ್ರಮವನ್ನುಕೈಗೊಳ್ಳುತ್ತದೆ. ಇಂತಹ ಎಲ್ಲಾ ವ್ಯವಸ್ಥೆಗಳನ್ನು ನಾವು ನಮ್ಮ ಸಂವಿಧಾನದಲ್ಲಿ ಕಾಣಬಹುದಾಗಿದೆ ಎಂದು ಜೆಎಂಎಫ್‌ಸಿ ನ್ಯಾಯಾಧೀಶೆ ಎಚ್.ಆರ್.ಹೇಮಾ ತಿಳಿಸಿದರು.ನ್ಯಾಯಾಲಯ ಆವರಣದಲ್ಲಿ ವಿಶ್ವಗ್ರಾಹಕರ ಹಕ್ಕು ದಿನಾಚರಣೆ ಗಿಡಕ್ಕೆ ನೀರ ಎರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು. ತಾಲ್ಲೂಕು ವಕೀಲರ ಸಂಘ, ಕಾನೂನು ಸೇವಾಪ್ರಾಧಿಕಾರ ಸಹಯೋಗದಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಪ್ರತಿನಿತ್ಯ ನ್ಯಾಯಾಲಯಕ್ಕೆ ನ್ಯಾಯವನ್ನು ಬಯಸಿಬರುವ ಎಲ್ಲಾ ಕಕ್ಷಿದಾರರಿಗೆ ಕಾನೂನಿನಡಿಯಲ್ಲಿಯೇ ನ್ಯಾಯವನ್ನು ದೊರಕಿಸಿಕೊಡಬೇಕಾಗುತ್ತದೆ. ನಾವು ಯಾವುದೇ ಕಾರಣಕ್ಕೂ ಕಾನೂನಿಗೆ ಅಗೌರವ ತೋರಬಾರದು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು ಮಾತನಾಡಿ, ನಮ್ಮ ಸಂವಿಧಾನ ನಮಗೆ ನೀಡಿದ ಹಕ್ಕು, ಕರ್ತವ್ಯ, ಜವಾಬ್ದಾರಿಯ ಬಗ್ಗೆ ಈಗಾಗಲೇ ನ್ಯಾಯಾಧೀಶರು ಸಾಕಷ್ಟು ಮಾಹಿತಿ ನೀಡಿದ್ದಾರೆ. ಕಾನೂನಿನಿಂದ ನಮಗೆ ಆಗುವ ಹಲವಾರು ಉಪಯೋಗಗಳಿವೆ. ಆದರೆ, ಕಾನೂನು ಉಲ್ಲಂಘಿಸಿದರೆ ನಾವು ಶಿಕ್ಷೆಯನ್ನು ಅನುಭವಿಸಬೇಕಾಗುತ್ತದೆ. ಕಾನೂನು ನಿರ್ಲಕ್ಷಿಸುವವನ್ನು ಸಮಾಜವೂ ಸಹ ನಿರ್ಲಕ್ಷಿಸುತ್ತದೆ ಎಂದರು.

ವಕೀಲರ ಸಂಘ ಕಾರ್ಯದರ್ಶಿ ಎಂ.ಸಿದ್ದರಾಜು, ಖಜಾಂಚಿ ಆರ್.ರುದ್ರಯ್ಯ, ಜಡೇಕುಂಟೆಕುಮಾರ್ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕಿರಾಣಿ ಅಂಗಡಿ ಬಾಗಿಲು ಒಡೆದು ಕಳ್ಳತನ



» ಚಳ್ಳಕೆರೆ

ನಗರದ ಪಾವಗಡ ರಸ್ತೆಯ ಎರಡನೇ ಕ್ರಾಸ್‌ನ ಪ್ರಿಯಾಂಕ ಪ್ರಾವಿಜನಲ್ ಸ್ಟೋರ್‌ನ ಬಾಗಿಲು ಮುರಿದು ಅಂಗಡಿಯಲ್ಲಿದ್ದ ಐದು ಸಾವಿರ ನಗದು ಹಣವನ್ನು ಯಾರೋ ಕಳ್ಳರು ಕದ್ದು ಪರಾರಿಯಾದ ಘಟನೆ ನಡೆದಿದೆ. ಶುಕ್ರವಾರ ಬೆಳಗಿನ ಜಾವ ಈ ಘಟನೆ ನಡೆದಿದ್ದು, ಅಂಗಡಿಯ ಬಾಗಿಲು ಮುರಿದು ಒಳಪ್ರವೇಶಿಸಿದ ಕಳ್ಳರು ಯಾವುದೇ ವಸ್ತುಗಳನ್ನು ಮುಟ್ಟದೆ ನಗದು ಹಣವನ್ನು ಮಾತ್ರ ಕದ್ದುಕೊಂಡು ಹೋಗಿದ್ದಾರೆ. ಸುದ್ದಿ ತಿಳಿದ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಂಗಡಿ ಮಾಲೀಕ ಪಿ.ರವಿ ದೂರು ನೀಡಿದ್ದು, ಪಿಎಸ್‌ಐ ಜೆ.ಶಿವರಾಜ್ ಪ್ರಕರಣ ದಾಖಲಿಸಿದ್ದಾರೆ. ನಗರದ ಬೆಂಗಳೂರು ರಸ್ತೆಯ ಮಾರುತಿಪ್ರಾವಿಜನ್ ಸ್ಟೋರ್‌ಬಳಿ ನರಹರಿ ನಗರದ ರವಿಕುಮಾರ್ ಎಂಬುವವರ 1.40 ಲಕ್ಷವನ್ನು ಅವರ ಸ್ಕೂಟರ್ ಡಿಕ್ಕಿಯಿಂದ ಅಪಹರಿಸಿದ ಬಗ್ಗೆ ತಡವಾಗಿ ರವಿಕುಮಾರ್ ದೂರು ನೀಡಿದ್ದು ಠಾಣಾಧಿಕಾರಿ ಶ್ರೀನಿವಾಸ್ ಪ್ರಕರಣ ದಾಖಲಿಸಿದ್ದಾರೆ.

### 6 ಸಾವಿರ ಮೌಲ್ಯದ ಮದ್ಯ ವಶ



» ಚಳ್ಳಕೆರೆ

ನಗರದಿಂದ ನನ್ನಿವಾಳ ಕಡೆಗೆ ಅಬಕಾರಿ ಇಲಾಖೆ ಅನುಮತಿ ಇಲ್ಲದೆ ಸುಮಾರು 6 ಸಾವಿರ ಮೌಲ್ಯದ 7.2 ಲೀಟರ್ ಮದ್ಯದ ಪೌಚನ್ನು ದ್ವಿಚಕ್ರ ವಾಹನದಲ್ಲಿ ಸಾಗಿಸುವ ಸಂದರ್ಭದಲ್ಲಿ ಅಬಕಾರಿ ಇಲಾಖೆ ಅಧಿಕಾರಿಗಳು ದಾಳಿ ನಡೆಸಿ ಪ್ರಕರಣ ದಾಖಲಿಸಿದ್ದಾರೆ. ನನ್ನಿವಾಳ ಗ್ರಾಮದ ತಿಪ್ಪೇಸ್ವಾಮಿ ಎಂಬ ವ್ಯಕ್ತಿ ತನ್ನ ಸ್ಕೂಟರ್‌ನಲ್ಲಿ ಅಕ್ರಮವಾಗಿ ಮದ್ಯದ ಪೌಚ್‌ಗಳನ್ನು ಸಾಗಾಟ ಮಾಡುತ್ತಿದ್ದು, ಖಚಿತ ಮಾಹಿತಿ ಮೇರೆಗೆ ಸ್ಥಳಕ್ಕೆ ಭೇಟಿ ನೀಡಿದ ಅಬಕಾರಿ ಅಧಿಕಾರಿಗಳು ವಾಹನ ಸಮೇತ ವ್ಯಕ್ತಿಯನ್ನು ವಶಕ್ಕೆ ಪಡೆದಿದ್ದಾರೆ. ಅಬಕಾರಿ ಇನ್ಸ್‌ಪೆಕ್ಟರ್ ನಾಗರಾಜು, ಸಬ್‌ಇನ್ಸ್‌ಪೆಕ್ಟರ್ ಟಿ.ರಂಗಸ್ವಾಮಿ, ಡಿ.ಟಿ.ತಿಪ್ಪಯ್ಯ, ಸಿಬ್ಬಂದಿ ಸೋಮಶೇಖರ್, ದರ್ಶನ್‌ಕುಮಾರ್ ದಾಳಿಯಲ್ಲಿ ಭಾಗವಹಿಸಿದ್ದರು.

### ಮಾರ್ಚ್‌19ರಂದು ವಿವಿಧ ಯೋಜನೆಗಳ ಕುರಿತು ಕಾರ್ಯಾಗಾರ

» ಚಿತ್ರದುರ್ಗ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಇದೇ ಮಾರ್ಚ್ 19ರಂದು ಬೆಳಿಗ್ಗೆ 11.15ಕ್ಕೆ ಚಿತ್ರದುರ್ಗ ನಗರದ ಬೈಪಾಸ್ ರಸ್ತೆಯ ಆರ್‌ಟಿಓ ಆಫೀಸ್ ಹಿಂಭಾಗದಲ್ಲಿರುವ ಐಶ್ವರ್ಯ ನವೀನ್ ಹೋಟೆಲ್‌ನ 3ನೇ ಮಹಡಿ ಸಭಾಂಗಣದಲ್ಲಿ ಮಾಧ್ಯಮ ಪ್ರತಿನಿಧಿಗಳಿಗೆ ಆರೋಗ್ಯ ಇಲಾಖೆಯ ವಿವಿಧ ಯೋಜನೆಗಳ ಬಗ್ಗೆ ಒಂದು ದಿನದ ಕಾರ್ಯಾಗಾರ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ತಿಳಿಸಿದ್ದಾರೆ.

### ಆಯ್ಕೆಯಾದ ಪುಸ್ತಕಗಳ ಪಟ್ಟಿ ಪ್ರಕಟ

» ಚಿತ್ರದುರ್ಗ

2021ರಲ್ಲಿ ಮುದ್ರಣಗೊಂಡು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಸ್ವೀಕರಿಸಿದ ಕನ್ನಡ, ಆಂಗ್ಲ, ಹಿಂದಿ ಮತ್ತು ಭಾರತೀಯ ಇತರೆ ಭಾಷಾ ಪುಸ್ತಕಗಳನ್ನು ಆಯ್ಕೆಸಮಿತಿಯಿಂದ ಮಂಡಿಸಲಾಗಿತ್ತು. ಆಯ್ಕೆ ಸಮಿತಿಯು ಆಯ್ಕೆ ಪ್ರತಿಕ್ರಿಯೆ ಪೂರ್ಣಗೊಳಿಸಿದ್ದು, ಆಯ್ಕೆಯಾದ ಪುಸ್ತಕಗಳನ್ನು ಇಲಾಖಾ ಜಾಲಾತಾಣ dpl Karnataka.gov.in ರಲ್ಲಿ 2025ರ ಮಾರ್ಚ್ 15ರಂದು ಪ್ರಕಟಿಸಲಾಗಿದೆ.

ಲೇಖಕರು, ಲೇಖಕ–ಪ್ರಕಾಶಕರು ಮತ್ತು ಪುಸ್ತಕ ಸರಬರಾಜುದಾರರು ಸಲ್ಲಿಸಿದ ಪುಸ್ತಕಗಳ ಹೆಸರು, ಪ್ರಕಾಶಕರು ಹೆಸರು ಸರರಾಜುದಾರರ ಹೆಸರು, ಲೇಖಕರ ಹೆಸರು, ಪುಟ ಸಂಖ್ಯೆ ಮುಖ ಬೆಲೆ ನಿಗದಿತಬೆಲೆ ಪುಸ್ತಕದ ಅಳತೆ ಹಾಗೂ ಇತರೆ ತಾಂತ್ರಿಕ ವ್ಯತಾಸಗಳಿದ್ದಲ್ಲಿ ಇದೇ ಮಾರ್ಚ್ 18ರ ಒಳಗಾಗಿ ಆಯುಕ್ತರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, 4ನೇ ಮಹಡಿ ಹಾಗೂ ಡಾ ಅಂಬೇಡ್ಕರ್ ವೀದಿ ಬೆಂಗಳೂರು –560001 ಇಲ್ಲಿಗೆ ಲಿಖಿತವಾಗಿ ಅಥವಾ ಇ–ಮೇಲ್ ಮೂಲಕ ಮನವಿಗಳನ್ನು ಸಲ್ಲಿಸಬಹುದಾಗಿದೆ ಎಂದು ಚಿತ್ರದುರ್ಗ ನಗರ ಕೇಂದ್ರ ಗ್ರಂಥಾಲಯ ಮುಖ್ಯ ಗ್ರಂಥಾಲಯಾಧಿಕಾರಿ ಕೊಳ್ಳಿ ಬಸವರಾಜ ತಿಳಿಸಿದ್ದಾರೆ.

---

ಬುಡ್ನಹಟ್ಟಿ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ

# ಸಾರ್ವಜನಿಕರ ಹಿತರಕ್ಷಣೆಗೆ ಸರ್ಕಾರ ಬದ್ಧ: ಶಾಸಕ

» ಚಳ್ಳಕೆರೆ

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮಪಂಚಾಯಿತಿ ಮಟ್ಟದಲ್ಲೂ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗುತ್ತಿದೆ. ಸಾರ್ವಜನಿಕ ಹಿತದೃಷ್ಟಿಯಿಂದ ಸರ್ಕಾರ ಗ್ರಾಮ ಪಂಚಾಯಿತಿ ಕಟ್ಟಡವೂ ಸೇರಿದಂತೆ ಹಲವಾರು ಕಾಮಗಾರಿಗಳಿಗೆ ಹಣ ನೀಡಿದೆ. ಸಾರ್ವಜನಿಕರ ಹಿತವನ್ನು ಕಾಪಾಡುವಲ್ಲಿ ಸರ್ಕಾರ ಯಶಸ್ವಿ ಹೆಜ್ಜೆ ಇಟ್ಟಿದೆ ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಭಾನುವಾರ ತಾಲ್ಲೂಕಿನ ಬುಡ್ನಹಟ್ಟಿ ಗ್ರಾಮದಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ, ವಿಧಾನಪರಿಷತ್ ಸದಸ್ಯರ ಅನುದಾನ, ಗ್ರಾಮ ಪಂಚಾಯಿತಿ ಒಗ್ಗೂಡಿಸುವಿಕೆಯಡಿ ಸುಮಾರು 84 ಲಕ್ಷ ವೆಚ್ಚದಲ್ಲಿ ಗ್ರಾಮ ಪಂಚಾಯಿತಿ ನೂತನ ಕಟ್ಟಡದ ಭೂಮಿಯನ್ನು ನೆರವೇರಿಸಿ ಮಾತನಾಡಿದರು. ಈ ಭಾಗದ ವಿಧಾನಪರಿಷತ್ ಸದಸ್ಯರಾದ ಕೆ.ಎಸ್.ನವೀನ್ ಸಹ ಪಂಚಾಯಿತಿ



ಮಟ್ಟದ ನಿರ್ಮಾಣಕ್ಕೆ ಅನುದಾನ ನೀಡಿದ್ದಾರೆ. ಅವರೂ ಸಹ ಅಭಿವೃದ್ಧಿ ಕಾಮಗಾರಿಗಳಿಗೆ ಸಹಕರಿಸಿದ್ದಾರೆ. 10 ಲಕ್ಷ ವೆಚ್ಚದಲ್ಲಿ ಪೀರಲದೇವರ ಗುಡಿನಿರ್ಮಾಣ ಭೂಮಿಪೂಜೆ, 10 ಲಕ್ಷವೆಚ್ಚದಲ್ಲಿ ಮಾರಮ್ಮದೇವಿ ದೇವಸ್ಥಾನ ನಿರ್ಮಾಣಕ್ಕೂ ಭೂಮಿಪೂಜೆ ನೆರವೇರಿಸಲಾಯಿತು. ಗ್ರಾಮದ ಜನರು ಸರ್ಕಾರದ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳುವಲ್ಲಿ ಮುಂದೆ ಬರಬೇಕೆಂದರು. ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್‌ಮಾತನಾಡಿ, ಶಾಸಕ ಟಿ.ರಘುಮೂರ್ತಿ ತಮ್ಮ ಅಭಿವೃದ್ಧಿ ಕಾಮಗಾರಿಗಳಿಂದಲೇ ಜನಮನ್ನಣೆ ಗಳಿಸಿದವರು. ನಾನು ಸಹ ಈ ಭಾಗದ ವಿಧಾನಪರಿಷತ್ ಸದಸ್ಯನಾಗಿ ಅಗತ್ಯವಿರುಕಡೆ ಅನುದಾನವನ್ನು ನೀಡುತ್ತಿದ್ದೇನೆ. ಗ್ರಾಮ ಪಂಚಾಯಿತಿ ಕಟ್ಟಡಕ್ಕೆ ಅನುದಾನ ನೀಡಿದ್ದೇನೆ. ರಾಜಕೀಯ ಕ್ಷೇತ್ರದಲ್ಲಿ ವಿಭಿನ್ನತೆ ಇದ್ದರೂ ಅಭಿವೃದ್ಧಿ ಕಾಮಗಾರಿ ಜಾರಿಗೊಳಿಸುವಲ್ಲಿ ಯಾವುದೇ ಭಿನ್ನಮತವಿಲ್ಲ. ರಘುಮೂರ್ತಿಯವರ ನಿರಂತರ ಅಭಿವೃದ್ಧಿಯನ್ನು ನಾನು ಶ್ಲಾಘೀಸುತ್ತಲೇ ಬಂದಿದ್ದೇನೆಂದರು.

ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಎಚ್.ಶಶಿಧರ, ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ನಿರ್ಮಿತಿಕೇಂದ್ರ ಇಂಜಿನಿಯರ್ ಸಿದ್ದೇಶ್, ಗ್ರಾಮ ಪಂಚಾಯಿತಿ ಲಕ್ಷ್ಮಕ್ಕ, ಉಪಾಧ್ಯಕ್ಷ ರಾಮಣ್ಣ, ಬ್ಲಾಕ್‌ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಯ್ಯ, ನಗರಸಭಾಸದಸ್ಯ ಬಿ.ಟಿ.ರಮೇಶ್‌ಗೌಡ, ಬಾಳೆಮಂಡಿರಾಮದಾಸ್, ತಾಪಂ ಮಾಜಿ ಸದಸ್ಯ ಕಳ್ಳಿನಿಂಗಯ್ಯ, ದೊಡ್ಡರಂಗಪ್ಪ, ಸೂರಯ್ಯ, ಶಶಿಧರ, ಬೋರಯ್ಯ, ಶ್ರೀನಿವಾಸ್, ತಿಪ್ಪೇಸ್ವಾಮಿ, ಸುಮಲತಾ, ಜಗದೀಶ್‌ನಾಯ್ಕ, ಕೃಷ್ಣನಾಯ್ಕ, ರಂಗಸ್ವಾಮಿ, ಪಿಡಿಒ ಮಲ್ಲೇಶಪ್ಪ ಮುಂತಾದವರು ಉಪಸ್ಥಿತರಿದ್ದರು.

---

# ಮಕ್ಕಳಿಗೆ ಪಠ್ಯ ಎಷ್ಟು ಮುಖ್ಯವೋ ಅಷ್ಟೇ ಪ್ರಮಾಣದಲ್ಲಿ ಪಠ್ಯೇತರ ಚಟುವಟಿಕೆಗಳು ಅಗತ್ಯ

» ಚಿತ್ರದುರ್ಗ

ಮಕ್ಕಳಿಗೆ ಪಠ್ಯ ಎಷ್ಟು ಮುಖ್ಯವೋ ಅಷ್ಟೇ ಪ್ರಮಾಣದಲ್ಲಿ ಪಠ್ಯೇತರ ಚಟುವಟಿಕೆಗಳು ಅಗತ್ಯವಾಗಿದೆ ಇದನ್ನು ಮಾಡಿಸುವಲ್ಲಿ ದೈಹಿಕ ಶಿಕ್ಷಕನ ಪಾತ್ರ ಅತಿ ಮುಖ್ಯವಾಗಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಮಂಜುನಾಥ್ ತಿಳಿಸಿದರು.

ಚಿತ್ರದುರ್ಗ ನಗರದ ಎಸ್.ಆರ್.ಬಿ.ಎಂ.ಎಸ್, ರೋಟರಿ ಬಾಲಭವನದಲ್ಲಿ ಶುಕ್ರವಾರ ಸಂಜೆ ಹಮ್ಮಿಕೊಂಡಿದ್ದ ಕರ್ನಾಟಕ ರಾಜ್ಯ ಗ್ರೇಡ್–1 ದೈಹಿಕ ಶಿಕ್ಷಣ ಶಿಕ್ಷಕರ ಜಿಲ್ಲಾ ಹಾಗೂ ತಾಲ್ಲೂಕು ಚುನಾಯಿತ ಪದಾಧಿಕಾರಿಗಳ ಪದಗ್ರಹಣ ಸಮಾರಂಭವನ್ನು ಉದ್ಘಾಟಿಸಿ ಚುನಾವಣೆಯಲ್ಲಿ ವಿಜೇತರಾದ ಪದಾಧಿಕಾರಿಗಳಿಗೆ ಪ್ರಮಾಣ ಪತ್ರವನ್ನು ವಿತರಿಸಿ ಮಾತನಾಡಿದ ಅವರು, ಮಕ್ಕಳು ಮಾನಸಿಕವಾಗಿ ಸಧೃಡರಾಗಿದ್ದಾರೆ ಅಷ್ಟೇ ಸಾಲದು ದೈಹಿಕವಾಗಿಯ ಸಹಾ ಬಲವಾಗಿ ಇರಬೇಕಿದೆ ಇದಕ್ಕೆ ಕ್ರೀಡೆ ಸಹಕಾರಿಯಾಗಿದೆ ಇದನ್ನು ಮಾಡಿಸುವ ಕಾರ್ಯವನ್ನು ನಮ್ಮ ದೈಹಿಕ ಶಿಕ್ಷಕರು ಮಾಡುತ್ತಾರೆ. ಒಂದು ಶಾಲೆಯಲ್ಲಿ ಸಾಮಾನ್ಯ ವಿಷಯವನ್ನು ಭೋಧಿಸುವ ಶಿಕ್ಷಕರಷ್ಟೇ ದೈಹಿಕ ಶಿಕ್ಷಕರು ಸಹಾ ಸಮಾನರಾಗಿದ್ದಾರೆ ಎಂದರು.

ಒಂದು ಶಾಲೆಯಲ್ಲಿ ದೈಹಿಕ ಶಿಕ್ಷಕರಿದ್ದರೆ ಅಲ್ಲಿನ ಮಕ್ಕಳಲ್ಲಿ ಶಿಸ್ತು, ಸಂಯಮ, ಶಿಷ್ಟಾಚಾರ ಪಾಲನೆಯಾಗುತ್ತದೆ ಮಕ್ಕಳಲ್ಲಿ ಸಮಯ ಪ್ರಜ್ಞೆ ಮೂಡುತ್ತದೆ, ವಿದ್ಯಾರ್ಥಿಗಳಲ್ಲಿ ನಾಯಕತ್ವ ಗುಣ ಬೆಳೆಯುತ್ತದೆ. ನಮ್ಮ ಮಕ್ಕಳನ್ನು



ಉತ್ತಮ ಪ್ರಜೆಗಳನ್ನಾಗಿ ಮಾಡುವಲ್ಲಿ ಸಾಮಾನ್ಯ ಶಿಕ್ಷಕರ ಪಾತ್ರದ ಜೊತೆಗೆ ದೈಹಿಕ ಶಿಕ್ಷಕರ ಪಾತ್ರವೂ ಅತಿ ಮುಖ್ಯವಾಗಿದೆ. ಮಕ್ಕಳ ಸರ್ವತೋಮುಖ ಬೆಳವಣಿಗೆಯಲ್ಲಿ ದೈಹಿಕ ಶಿಕ್ಷಕರ ಪಾತ್ರವೂ ಸಹಾ ಮುಖ್ಯವಾಗಿದೆ. ಚಿತ್ರದುರ್ಗದಲ್ಲಿ ನಡೆದ ರಾಜ್ಯ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ದೈಹಿಕ ಶಿಕ್ಷಕರು ಉತ್ತಮವಾದ ಕಾರ್ಯವನ್ನು ಮಾಡಿದ್ದಾರೆ ಬೇರೆ ಕಡೆಯಿಂದ ಬಂದ ಮಕ್ಕಳನ್ನು ಚನ್ನಾಗಿ ನೋಡಿಕೊಂಡಿದ್ದಾರೆ ಅವರು ಕೆಲಸ ಉತ್ತಮವಾಗಿದೆ ಎಂದು ದೈಹಿಕ ಶಿಕ್ಷಕರ ಪಾತ್ರವನ್ನು ಉಪ ನಿರ್ದೇಶಕರು ಪ್ರಂಶಿಸಿದರು.

ಪ್ರೌಢಶಾಲಾ ಸಹ ಶಿಕ್ಷಕರು ಸಂಘದ ಅಧ್ಯಕ್ಷರಾದ ಶಿವಣ್ಣ ಮಾತನಾಡಿ, ದೈಹಿಕ ಶಿಕ್ಷಕರ ಸಂಘಕ್ಕೆ ನಮ್ಮ ಸಂಘವೂ ಸಹಾ ಸದಾ ಬೆಂಬಲವನ್ನು ನೀಡಲಿದೆ, ನಿಮ್ಮ ಬೇಡಿಕೆಗಳನ್ನು ಈಡೇರಿಸುವಲ್ಲಿ ನಾವು ಸಹಾ ಕೈಜೋಡಿಸುವುದಾಗಿ ತಿಳಿಸಿ, ಸಂಘ ಉತ್ತಮವಾಗಿದ್ದರೆ ಮಾತ್ರ ನಿಮ್ಮ ಬೇಡಿಕೆಗಳನ್ನು ಈಡೇರಿಸಿಕೊಳ್ಳಲು ಸಾಧ್ಯವಿದೆ, ನಿಮ್ಮಲ್ಲಿ ಒಗ್ಗಟ್ಟನ್ನು ಪ್ರದರ್ಶನ ಮಾಡಿ ಸಂಘ ಸದಾ ಕ್ರಿಯಾಶೀಲವಾಗಿ ಇರುವಂತೆ ನೋಡಿಕೊಳ್ಳಿ ಎಂದು ಕಿವಿ ಮಾತು ಹೇಳಿದರು. ಮುಖ್ಯೋಪಾಧ್ಯಯರ ಸಂಘದ ಅಧ್ಯಕ್ಷರಾದ ನಾಗೇಂದ್ರಪ್ಪ ಮಾತನಾಡಿ, ದೈಹಿಕ ಶಿಕ್ಷಕರಿಲ್ಲದ ಶಾಲೆ ದೇವರಿಲ್ಲದ ಗುಡಿ ಇದ್ದಂತೆ ಪ್ರತಿಯೊಂದು ಶಾಲೆಯಲ್ಲಿ ದೈಹಿಕ ಶಿಕ್ಷಕರು ಇರಲೇ ಬೇಕಿದೆ ಇವರಿಂದ ಮಾತ್ರ ಮಕ್ಕಳು ದೈಹಿಕವಾಗಿ ಸಮರ್ಥರಾಗಲು ಸಾಧ್ಯವಿದೆ. ಮಕ್ಕಳ ಸರ್ವತೋಮುಖ ಅಭೀವೃದ್ಧಿಯಲ್ಲಿ ಇವರ ಪಾತ್ರ ಹೆಚ್ಚಿನ ರೀತಿಯಲ್ಲಿ ಇದೆ. ಮಕ್ಕಳಲ್ಲಿ ಶಿಸ್ತು ಮೂಡಲು ದೈಹಿಕ ಶಿಕ್ಷಕರ ಶ್ರಮ ಹೆಚ್ಚಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸಹಾಯಕ ಚುನಾವಣಾಧಿಕಾರಿ ಮಹಾಲಿಂಗಪ್ಪ, ಡಿಪಿಇಓ ಚಿದಾನಂದಪ್ಪ, ಟಿಪಿಇಓ ಚನ್ನಬಸಪ್ಪ, ಜಿಲ್ಲಾ ಸಂಘದ ಪ್ರಧಾನ ಕಾರ್ಯದರ್ಶಿ ದಿವಾಕರ, ರಾಜ್ಯ ಪರಿಷತ್ ಸದಸ್ಯರಾದ ರಾಜಪ್ಪ, ಪ್ರಧಾನ ಕಾರ್ಯದರ್ಶಿ ನಾಗೇಂದ್ರಪ್ಪ, ಯೋಗೀಶ್ ಕೊಂಡಾಪುರ, ಶ್ರೀಮತಿ ಲತಾ, ಅಶೋಕ್, ಮೈಲಾರಪ್ಪ, ಕೆಂಚಪ್ಪ, ನಿಕಟ ಪೂರ್ವ ಅಧ್ಯಕ್ಷರಾದ ಮಂಜುನಾಥ್, ಭಾಗವಹಿಸಿದ್ದರು.

ವಿಜಯಪ್ರಸಾದ್ ಪ್ರಾರ್ಥಿಸಿದರೆ. ಚನ್ನಬಸಪ್ಪ ಸ್ವಾಗತಿಸಿದರು, ಸಂಘಟನಾ ಕಾರ್ಯದರ್ಶಿ ಪಾಂಡುರಂಗಪ್ಪ ಪ್ರಸ್ತಾವಿಕವಾಗಿ ಮಾತನಾಡಿದರೆ. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕಲ್ಲೇಶ್ ಕಾರ್ಯಕ್ರಮ ನಿರೂಪಿಸಿದರು.

### ಲ್ಯಾಪ್‌ಟಾಪ್ ವಿತರಣೆ



» ದಾವಣಗೆರೆ

2024ರ ಮಾರ್ಚ್ ತಿಂಗಳಲ್ಲಿ ನಡೆದ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಉಚಿತ ಲ್ಯಾಪ್‌ಟಾಪ್ ವಿತರಿಸಿದರು.ಶಾಸಕ ನಿವಾಸದಲ್ಲಿ ಶನಿವಾರ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಿಸಿ ಮಾತನಾಡಿದ ಶಾಸಕರು, ಇದೇ ಮಾ.21ರಿಂದ ಎಸ್ಸೆಸ್ಸೆಲ್ಸಿ ಪರೀಕ್ಷೆ ಆರಂಭವಾಗಲಿದ್ದು, ಮಕ್ಕಳು ಯಾವುದೇ ಆತಂಕ ಇಲ್ಲದೆ ಪರೀಕ್ಷೆ ಎದುರಿಸುವ ಮೂಲಕ ಉತ್ತಮ ಅಂಕಗಳನ್ನು ಪಡೆಯುವಂತೆ ಸಲಹೆ ನೀಡಿದರು.ಈ ಸಂದರ್ಭದಲ್ಲಿ ದಕ್ಷಿಣ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಪುಷ್ಪಲತಾ, ಇಸಿಒ ಗೋವಿಂದರಾಜ್ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಇಫ್ತಿಯಾರ್ ಕೂಟದಲ್ಲಿ ಎಸ್ಪಿ ಭಾಗಿ



» ಚಿತ್ರದುರ್ಗ

ಒಂದು ತಿಂಗಳ ಕಾಲ ಒಂದೊತ್ತು ಉಪವಾಸ ಆಚರಿಸಿ ಪರಮ ಪವಿತ್ರವಾದ ರಂಜಾನ್ ಹಬ್ಬದ ಇಫ್ತಿಯಾರ್ ಕೂಟದಲ್ಲಿ ಜಿಲ್ಲಾ ರಕ್ಷಣಾಧಿಕಾರಿ ರಂಜಿತ್‌ಕುಮಾರ್ ಬಂಡಾರು ಭಾಗವಹಿಸಿದ್ದರು. ಪ್ರಸನ್ನ ಟಾಕೀಸ್ ರಸ್ತೆಯಲ್ಲಿರುವ ಉಮರ್ ಸರ್ಕಲ್‌ನಲ್ಲಿ ಶುಕ್ರವಾರ ಸಂಜೆ ಇಫ್ತಿಯಾರ್ ಕೂಟದಲ್ಲಿ ಪಾಲ್ಗೊಂಡು ಸಮಸ್ತ ಮುಸ್ಲಿಂ ಬಾಂಧವರಿಗೆ ರಂಜಾನ್ ಹಬ್ಬದ ಶುಭಾಷಯ ಕೋರಿದ ಜಿಲ್ಲಾ ರಕ್ಷಣಾಧಿಕಾರಿ ಈ ತಿಂಗಳಲ್ಲಿ ಯುಗಾದಿ ಹಾಗೂ ರಂಜಾನ್ ಹಬ್ಬ ಜೊತೆಯಾಗಿ ಆಚರಿಸುತ್ತಿರುವುದರಿಂದ ಹಿಂದೂ–ಮುಸ್ಲಿಂರು ಪರಸ್ಪರ ಶಾಂತಿ ಹಾಗೂ ಸಹಬಾಳ್ವೆಯಿಂದ ಹಬ್ಬವನ್ನು ಆಚರಿಸುವಂತೆ ಕರೆ ನೀಡಿದರು.

---

## ಪ್ರಮುಖ ಸುದ್ದಿ

ಗ್ರಾಮ ಆರೋಗ್ಯ ಪೌಷ್ಠಿಕ ದಿನದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್

# ಅಪೌಷ್ಠಿಕತೆಯಿಂದ ಶಿಶು, ತಾಯಿ ಮರಣ ಆಗಬಾರದು

» ಚಿತ್ರದುರ್ಗ

ಅಪೌಷ್ಟಿಕತೆಯ ಕಾರಣದಿಂದ ಶಿಶು ಮರಣ, ತಾಯಿ ಮರಣ ಆಗಬಾರದು ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ತಾಲ್ಲೂಕಿನ ತುರುವನೂರು ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಅಂಗನವಾಡಿ ಕೇಂದ್ರದಲ್ಲಿ ಶನಿವಾರ ಆರೋಗ್ಯ ಇಲಾಖೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಗ್ರಾಮ ಆರೋಗ್ಯ ಪೌಷ್ಠಿಕ ದಿನದಲ್ಲಿ ಅವರು ಮಾತನಾಡಿದರು.

ಗರ್ಭಿಣಿ ಆರೈಕೆ, ಬಾಣಂತಿ ಆರೈಕೆ, ಮಕ್ಕಳ ಆರೈಕೆ, ತಾಯಿ ಮಕ್ಕಳ ಆರೋಗ್ಯ ಸೇವೆಯಲ್ಲಿ ಪ್ರಮುಖ ಜವಾಬ್ದಾರಿಗಳಾಗಿವೆ. 12 ವಾರಗಳ ಒಳಗಡೆ ಗರ್ಭಿಣಿಯರನ್ನು ನೋಂದಾಯಿಸಿ, ತಾಯಿ ಕಾರ್ಡ್ ವಿತರಣೆ ಮಾಡಿ. ಪ್ರಾಥಮಿಕ ಹಂತದ ತಪಾಸಣೆ ನಡೆಸಿ ರಕ್ತದ ಒತ್ತಡ ಪರೀಕ್ಷೆ, ಹಿಮೋಗ್ಲೋಬಿನ್ ಪರೀಕ್ಷೆ ದಾಖಲಾತಿ ತೆಗೆದುಕೊಳಿ. ಪ್ರತಿ ತಿಂಗಳು ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಲ್ಲಿ ಪಾಲ್ಗೊಳ್ಳುವಂತೆ ಮನವರಿಕೆ ಮಾಡಿ ಪೌಷ್ಟಿಕ ಆಹಾರ ಸೇವನೆಯ ಬಗ್ಗೆ ತಿಳಿಸಿ ಸುರಕ್ಷಿತ ತಾಯ್ತನ ಪಡೆಯುವಂತೆ ಮಾಡಿ



ಎಂದು ಹೇಳಿದರು.

ಮನೆ ಆಧಾರಿತ ನವಜಾತ ಶಿಶು ಭೇಟಿ ಕಾರ್ಯಕ್ರಮಗಳ ಬಲವರ್ಧನೆಗೊಳಿಸಿ, ಎದೆ ಹಾಲು ಉಣಿಸುವಿಕೆ, ಮಕ್ಕಳಿಗೆ ನೀಡುವ ಪೂರಕ ಪೌಷ್ಠಿಕ ಆಹಾರದ ಮಾಹಿತಿಯನ್ನು ಗ್ರಾಮ ಆರೋಗ್ಯ ಪೌಷ್ಠಿಕ ದಿನದಂದು ಎಲ್ಲಾ ತಾಯಂದಿರಿಗೂ ತಿಳಿಸಿಕೊಡಿ ಎಂದು ಸಲಹೆ ನೀಡಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಮಾತನಾಡಿ, ವಾರದಲ್ಲಿ ಎರಡು ದಿನ ಪ್ರತಿ ಮಂಗಳವಾರ ಮತ್ತು ಶುಕ್ರವಾರ ಗೃಹ ಆರೋಗ್ಯ ಸೇವೆ ಒದಗಿಸಲು ಸಮುದಾಯ ಆರೋಗ್ಯ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು, ಆರೋಗ್ಯ ನಿರೀಕ್ಷಣಾಧಿಕಾರಿಗಳು ನಿಮ್ಮ ಮನೆಗಳಿಗೆ ಭೇಟಿ ನೀಡುತ್ತಾರೆ. ಸಾಂಕ್ರಾಮಿಕವಲ್ಲದ ರೋಗಗಳಾದ ರಕ್ತದ ಒತ್ತಡ, ಮಧುಮೇಹ, ಬಾಯಿ ಕ್ಯಾನ್ಸರ್, ಸ್ತನ ಕ್ಯಾನ್ಸರ್ ತಪಾಸಣೆ ನಡೆಸಿ ಸೂಕ್ತ ಚಿಕಿತ್ಸೆಯ ಮಾರ್ಗದರ್ಶನ ಉಚಿತವಾಗಿನೀಡುತ್ತಾರೆ.ಈಸಂದರ್ಭದಲ್ಲಿ 30 ವರ್ಷದ ಮೇಲ್ಪಟ್ಟ ಎಲ್ಲಾ ನಾಗರಿಕರು ತಪಾಸಣೆ ಮಾಡಿಸಿಕೊಳ್ಳಿ. ಮಧುಮೇಹ, ರಕ್ತದ ಒತ್ತಡ ರೋಗಗಳಿಂದ ಮುಕ್ತಿ ಪಡೆಯಿರಿ, ಅಲ್ಲದೆ ಮಕ್ಕಳಿಗೆ ಕಾಲಕಾಲಕ್ಕೆ 12 ಮಾರಕ ರೋಗಗಳ ವಿರುದ್ಧ ಲಸಿಕೆ ಕೊಡಿಸಿ ಎಂದು ಹೇಳಿದರು.

ಈ ದಿನ ನಿಮ್ಮ ಮುಂದೆ ಪೌಷ್ಠಿಕ ಆಹಾರದ ಪ್ರಾತ್ಯಕ್ಷಿಕೆ ನೀಡಲಾಗಿದೆ. ನುಗ್ಗೆಕಾಯಿ, ನುಗ್ಗೆ ಸೊಪ್ಪಿನಲ್ಲಿ ಹೇರಳವಾಗಿ ಕಬ್ಬಿನಾಂಶ, ಕ್ಯಾಲ್ಸಿಯಂ ಅಂಶ ವಿಟಮಿನ್ ಮತ್ತು ಬಿ ಕಾಂಪ್ಲೆಕ್ಸ್‌ಗಳ ಅಂಶ ದೊರೆಯುತ್ತದೆ. ಬೇಳೆ ಕಾಳು ಸೇವನೆ ಮಾಡಿ ಅಗತ್ಯ ಪೋಷಕಾಂಶಗಳನ್ನು ನಿಮ್ಮ ದೇಹಕ್ಕೆ ನೀಡಿ, ಬೇಸಿಗೆ ಕಾಲವಾಗಿರುವುದರಿಂದ ಶಾಖದ ಗಾಳಿ, ಶಾಖದ ಅಲೆ ಸಂಭವಿಸುವ ಬಗ್ಗೆ ಈಗಾಗಲೇ ಜಿಲ್ಲಾಧಿಕಾರಿಗಳು ಆದೇಶ ಹೊರಡಿಸಿರುತ್ತಾರೆ ಎಂದರು.ಬಿಸಿಲಿನಲ್ಲಿ ವಿನಾಕಾರಣ ಓಡಾಡುವುದು ಬೇಡ. ನೀರು ಹೆಚ್ಚಾಗಿ ಸೇವಿಸಿ ದ್ರವರೂಪದ ಆಹಾರ ಸೇವಿಸಿ ಬೆಳಿಗ್ಗೆ ಮತ್ತು ಸಂಜೆ ನಿಮ್ಮ ಕೆಲಸಗಳನ್ನು ಮಾಡಿಕೊಳ್ಳಿ. ಗರ್ಭಿಣಿ, ಬಾಣಂತಿಯರು ಮಕ್ಕಳು, ವಯೋ ವೃದ್ಧರು, ಮನೆಯಲ್ಲಿ ನೆರಳಿನಲ್ಲಿ ಇದ್ದು, ಎಳನೀರು ನಿಂಬೆಹಣ್ಣಿನ ರಸ ಹೆಚ್ಚು ಹೆಚ್ಚು ಕುಡಿಯರಿ. ಉಷ್ಣಾಘಾತ, ನಿರ್ಜಲೀಕರಣ ಆಗದಂತೆ ನೋಡಿಕೊಂಡು ನಿಮ್ಮ ಆರೋಗ್ಯ ಕಾಪಾಡಿಕೊಳ್ಳಿ ಎಂದರು.

ಸಮುದಾಯ ಆರೋಗ್ಯ ಅಧಿಕಾರಿಗಳಾದ ಮಾಂತಾ ರಾಥೋಡ್ ನವ್ಯಶ್ರೀ, ನಾಗಮಣಿ, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ವೀಣಾ, ಹಿರಿಯ ಆರೋಗ್ಯ ನಿರಕ್ಷಣಾಧಿಕಾರಿ ತಿಮ್ಮಣ್ಣ ನಾಯಕ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆ ಮಂಜುಳಾ, ಹಿರಿಯ ನಾಗರಿಕರ, ತಾಯಂದಿರು, ಗರ್ಭಿಣಿಯರು ಇದ್ದರು.

## ಫಾಸ್ಟ್ ನ್ಯೂಸ್

### ಹೊಸದುರ್ಗ: ಇಬ್ಬರು ಅಂತರ್ ಜಿಲ್ಲಾ ಸರಗಳ್ಳರ ಬಂಧನ, 9 ಲಕ್ಷ ಮೌಲ್ಯದ ಚಿನ್ನಾಭರಣ ವಶ



» **ಹೊಸದುರ್ಗ**

ತಾಲೂಕಿನ ಜನರ ಹಾಗೂ ಪೊಲೀಸರ ನಿದ್ದೆಗೆಡಿಸಿದ್ದ ಸರಗಳ್ಳರು ಕೊನೆಗೂ ಪೊಲೀಸರ ಖೆಡ್ಡಾಗೆ ಬಿದ್ದಿದ್ದಾರೆ. ಹೊಸದುರ್ಗ ಠಾಣೆ ಪೊಲೀಸರು ಕಾರ್ಯಚರಣೆ ನಡೆಸಿ, ಇಬ್ಬರು ಅಂತರ್ ಜಿಲ್ಲಾ ಮನೆ ಹಾಗೂ ಸರಗಳ್ಳರನ್ನು ಬಂಧಿಸಿದ್ದು, ಬಂದಿದ್ದರಿಂದ ಸುಮಾರು 8,90,000–00 ರೂ. ಬೆಲೆಬಾಳುವ 125 ಗ್ರಾಂ. ತೂಕದ ಬಂಗಾರದ ಒಡವೆಗಳು ಮತ್ತು 1 ಲಕ್ಷ ರೂ. ಬೆಲೆಬಾಳುವ 01 ಮೋಟಾರ್ ಸೈಕಲ್ ವಾಹನವನ್ನು ವಶಕ್ಕೆ ಪಡೆದಿದ್ದಾರೆ. ಬಂಧಿತರನ್ನು ಭದ್ರಾವತಿ ತಾಲೂಕಿನ ಗಂಗೂರು ಗ್ರಾಮದ ಸಂತೋಷ (46) ಮತ್ತು ಶಿವಮೊಗ್ಗ ತಾಲೂಕಿನ ಗಾಜನೂರು ಹೊಸಳ್ಳಿ ಗ್ರಾಮದ ಹೊನ್ನಕುಮಾರ (36) ಎಂದು ಗುರುತಿಸಲಾಗಿದೆ. ಇವರು ಹೊಸದುರ್ಗ ಪೊಲೀಸ್ ಠಾಣೆಯ 3 ಸರಗಳ್ಳತನ ಪ್ರಕರಣ ಹಾಗೂ ಒಂದು ಮನೆ ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿದ್ದರು ಎಂದು ತಿಳಿದು ಬಂದಿದೆ. ಈ ಪ್ರಕರಣವನ್ನು ಭೇದಿಸಲು ಎ.ಎಸ್.ಪಿ.ಕುಮಾರಸ್ವಾಮಿ ಅವರ ಮಾರ್ಗದರ್ಶನದಲ್ಲಿ, ಹಿರಿಯೂರು ಉಪ ವಿಭಾಗದ ಡಿ.ವೈ.ಎಸ್.ಪಿ. ಟಿ.ಎಂ. ಶಿವಕುಮಾರ್, ಹೊಸದುರ್ಗ ಠಾಣೆ ಪೊಲೀಸ್ ಇನ್ಸೆಕ್ಟರ್ ತಿಮ್ಮಣ್ಣನವರ ನೇತೃತ್ವದಲ್ಲಿ ಸಬ್ ಇನ್ಸೆಕ್ಟರ್ ಗಳಾದ ಭೀಮನಗೌಡ ಪಾಟೀಲ್, ಮಹೇಶ್ ಕುಮಾರ್ ಹಾಗೂ ಸಿಬ್ಬಂದಿಗಳಾದ ಸತ್ಯನಾರಾಯಣ, ಕುಮಾರ, ಗಂಗಾಧರ, ರಾಜಣ್ಣ, ನಟರಾಜ್, ಜಿಲ್ಲಾ ಪೊಲೀಸ್ ಕಚೇರಿಯ ತಾಂತ್ರಿಕ ವಿಭಾಗದ ಎ.ಎಸ್.ಐ ರಾಘವೇಂದ್ರ ಮತ್ತು ಸಿಬ್ಬಂದಿ ತಂಡದವರ ಈ ಕಾರ್ಯಾಚರಣೆಯನ್ನು ಎಸ್.ಪಿ. ರಂಜಿತ್ ಕುಮಾರ್ ಬಂಡಾರು ಶ್ಲಾಘಿಸಿರುತ್ತಾರೆ.

### ರಾಷ್ಟ್ರಮಟ್ಟದ ಸಾಹಿತ್ಯ ಸೌರಭ ಪ್ರಶಸ್ತಿ ಪಡೆದ ಸದಾಶಿವ ಸಂಕಲ್ಪ

» **ಹೊಸದುರ್ಗ**



ಕರ್ನಾಟಕ ಬರಹಗಾರರ ಸಂಘ(ರಿ) ಕಳೆದ 5 ವರ್ಷಗಳಿಂದ ಸಾಹಿತ್ಯ ಸೇವೆಯ ಜೊತೆ ಸಾಹಿತಿಗಳ ಬರವಣಿಗೆಯನ್ನು ಗುರುತಿಸಿ, ಗೌರವಿಸಿ ಮತ್ತು ಅವರನ್ನು ಸನ್ಮಾನಿಸುತ್ತಾ ಬಂದಿದೆ. ಅದರಂತೆಯೇ, 2025 ನೇ ಸಾಲಿನ ರಾಷ್ಟ್ರಮಟ್ಟದ ಸಾಹಿತ್ಯ ಸೌರಭ ಪ್ರಶಸ್ತಿಗೆ, ತಾಲೂಕಿನ ದೇವಿಗೆರೆ ಗ್ರಾಮದ ಸಾಹಿತಿ, ಕಾದಂಬರಿಕಾರ ಸದಾಶಿವ ಸಂಕಲ್ಪ ಇವರನ್ನು ಆಯ್ಕೆ ಮಾಡಿ, ಹೂವಿನಹಡಗಲಿಯ ಶಿವಮೊಗ್ಗದ ಕರ್ನಾಟಕ ಸಂಘದಲ್ಲಿ ಭಾನುವಾರ ಆಯೋಜಿಸಿದ್ದ "ರಾಷ್ಟ್ರಮಟ್ಟದ ನುಡಿ ವೈಭವ" ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಿ, ಸನ್ಮಾನಿಸಿ, ಗೌರವಿಸಲಾಗಿದೆ. ಸಂಕಲ್ಪ ಅವರು, ಇದುವರೆಗೂ ಆನಂದ ಪುಷ್ಪ (ಕಾದಂಬರಿ), ಈರ್ಷೆ (ಕಥಾ ಸಂಕಲನ), ಅಲಂಕಾರ (ಕವನ ಸಂಕಲನ), ಉತ್ತರಪಥ (ಕಾದಂಬರಿ) ಮತ್ತು ಇಳೆಯ ಮೇಲಿನ ನಕ್ಷತ್ರ (ಕಾದಂಬರಿ) ಕೃತಿಗಳನ್ನು ರಚಿಸಿದ್ದಾರೆ. ಇವರ ಸಾಹಿತ್ಯ ಸೇವೆಯನ್ನು ಗುರುತಿಸಿ, ಪ್ರಶಸ್ತಿ ನೀಡಿ, ಗೌರವಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಬರಹಗಾರರ ಸಂಘ ತಿಳಿಸಿದೆ.

### ಕಿರಾಣಿ ಅಂಗಡಿ ಕಳ್ಳತನ: 24ಗಂಟೆಯಲ್ಲಿ ಕಳ್ಳರನ್ನು ಪತ್ತೆಹಚ್ಚಿದ ಪೋಲೀಸರು

» **ಚಳ್ಳಕೆರೆ**





ನಗರದ ಪಾವಗಡ ರಸ್ತೆಯ ಪ್ರಿಯಾಂಕ ಪ್ರಾವಿಜನ್ ಸ್ಟೋರ್ಸ್‌ನಲ್ಲಿ ಮಾರ್ಚ್ 14ರ ಶುಕ್ರವಾರ ಬೆಳಗಿನ ಜಾವ ಕಳ್ಳತನ ನಡೆದಿದ್ದು, ಮಾರ್ಚ್ 15ರಂದು ಅಂಗಡಿ ಮಾಲೀಕ ವಿ.ರವಿ 5 ಸಾವಿರ ಹಣ ಹಾಗೂ ಇತರೆ ವಸ್ತುಗಳು ಕಳ್ಳತನವಾದ ಬಗ್ಗೆ ದೂರು ನೀಡಿದ್ದರು. ಪ್ರಕರಣದಾಖಲಿಸಿಕೊಂಡ ಪೊಲೀಸರು ಡಿವೈಎಸ್ಪಿ ರಾಜಣ್ಣ, ಠಾಣಾ ಇನ್ಸ್‌ಪೆಕ್ಟರ್ ರಾಜಫಕೃದ್ದೀನ್ ಮಾರ್ಗದರ್ಶನದಲ್ಲಿ ಪಿಎಸ್‌ಐ ಜೆ.ಶಿವರಾಜ್ ಮತ್ತು ತಂಡ ಕ್ಯಾತಗೊಂಡನಹಳ್ಳಿಯ ಮೂರ್ಖಣ್ಣ(33), ಮುರುಳಿ(28) ಇವರನ್ನು ವಶಕ್ಕೆ ಪಡೆದು ವಿಚಾರಿಸಿದಾಗ ಕಳ್ಳತನ ಮಾಡಿರುವುದಾಗಿ ಒಪ್ಪಿಕೊಂಡಿದ್ದು ಇವರನ್ನು ನ್ಯಾಯಾಂಗ ವಶಕ್ಕೆ ನೀಡಲಾಗಿದೆ.

# ಬಿಜೆಪಿ ಜಿಲ್ಲಾಧ್ಯಕ್ಷ ಮೇಲೆ ಪಿಎಸ್‌ಐ ಹಲ್ಲೆ: ಖಂಡನೆ

» **ಚಿತ್ರದುರ್ಗ**

ಮಧುಗಿರಿ ಬಿಜೆಪಿ ಜಿಲ್ಲಾಧ್ಯಕ್ಷರ ಮೇಲೆ ಹಲ್ಲೆ ಮಾಡಿರುವ ಪೋಲಿಸ್ ಅಧಿಕಾರಿಯನ್ನು ಕೆಲಸದಿಂದ ಅಮಾನತ್ತು ಮಾಡಬೇಕು ಈ ಘಟನೆಯ ಬಗ್ಗೆ ಪೋಲಿಸ್ ಇಲಾಖೆ ತನಿಖೆಯನ್ನು ಮಾಡಬೇಕೆಂದು ಸರ್ಕಾರವನ್ನು ಹಾಗೂ ಪೋಲಿಸ್ ಇಲಾಖೆಯನ್ನು ಸಂಸದರಾದ ಗೋವಿಂದ ಕಾರಜೋಳ ಆಗ್ರಹಿಸಿದ್ದಾರೆ.

ಚಿತ್ರದುರ್ಗ ಜಿಲ್ಲಾ ಅಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಹನುಮಂತೇಗೌಡರವರ ಆರೋಗ್ಯವನ್ನು ವಿಚಾರಿಸಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಂಸದರು, ನಿನ್ನೆ ರಾತ್ರಿ ನಗರದ ಐಶ್ವರ್ಯ ಪೋರ್ಟ್ ಬಳಿ ಮಧುಗಿರಿನ ಬಿಜೆಪಿ ಜಿಲ್ಲಾಧ್ಯಕ್ಷರ ಹನುಮಂತೇಗೌಡ ಹಾಗೂ ಪಿಎಸ್.ಐ. ಗಾದ್ರಿ ಲಿಂಗಪ್ಪ ಗೌಡರವರ ನಡುವೆ ಮಾತಿನ ಚಕಮಕಿ ನಡೆದು ಇಬ್ಬರು ಸಹಾ ಇಬ್ಬರ ಮೇಲೆ ಇಬ್ಬರು ಹಲ್ಲೆ ಮಾಡಿದ್ದಾರೆ. ಇವರನ್ನು ಕೊಲೆ ಮಾಡುವ ಹಿನ್ನಲೆಯಲ್ಲಿ ಪೋಲಿಸ್ ಅಧಿಕಾರಿ ತನ್ನ ಬಳಿ ಇದ್ದ ಪಿಸೂಲ್‌ನ್ನು ತೆಗೆದು ಇವರ ಮೇಲೆ ಗುರಿ ಇಟ್ಟಿದ್ದಾನೆ. ಇದನ್ನು ತಪ್ಪಿಸುವ ಸಲುವಾಗಿ ಹನುಮಂತೆಗೌಡ ಅವರ ಕೈಯನ್ನು ಹಿಡಿದಿದ್ದಾನೆ ಈ ಸಮಯದಲ್ಲಿ ಅವರ ಬೆರಳಿಗೆ ಗಾಯವಾಗಿದೆ, ಇದರಿಂದ ಆತ ನನನ್ನು ಹೊಡೆದಿದ್ದಾನೆ ಎಂದು ಹನುಮಂತೇಗೌಡರವರ ಮೇಲೆ ಹಲ್ಲೆ ಮಾಡಿದ್ದಾನೆ ಎದೆಗೆ, ತಲೆಗೆ, ಗುಪ್ತಾಂಗಕ್ಕೆ ಬೂಟ್ ಕಾಲಿನಿಂದ



ಹೊಡೆದಿದ್ದಾನೆ. ಇದರಿಂದ ಗಾಯಗೊಂಡ ಅವರನ್ನು ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದರು.

ರಾಜ್ಯದಲ್ಲಿ ಕಾಂಗ್ರೇಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಸಾರ್ವಜನಿಕರಿಗೆ ರಕ್ಷಣೆಯನ್ನು ನೀಡಬೇಕಾದ ಆರಕ್ಷಕರೇ ಜನತೆಯ ಮೇಲೆ ಹಲ್ಲೆ ಮಾಡುತ್ತಿದ್ದಾರೆ. ಕೆಲವು ಪೋಲಿಸರು ರಾಕ್ಷಸ ಪ್ರವೃತ್ತಿಯನ್ನು ಹೊಂದಿದ್ದಾರೆ. ಸರ್ಕಾರ ಇಂತಹವರ ಬಗ್ಗೆ ಅನುಕುಂಪವನ್ನು ತೋರಿಸುತ್ತಿದೆ.ಜನತೆಯ ರಕ್ಷಣೆಯನ್ನು ನೀಡುತ್ತಿಲ್ಲ, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಹನುಮಂತೆಗೌಡರವರ ಮೇಲೆ ಹಲ್ಲೆ ಮಾಡಿದ ಪೋಲಿಸ್ ಅಧಿಕಾರಿ ಕೆಲಸದಿಂದ ಅಮಾನತ್ ಆಗಬೇಕು ಇದರ ಬಗ್ಗೆ ಪೋಲಿಸ್ ಇಲಾಖೆವತಿಯಿಂದ ತನಿಖೆಯಾಗಬೇಕು ಆತನಿಂದ ಖಾಕಿ ಬಟ್ಟೆಯನ್ನು ಶಾಶ್ವತವಾಗಿ ಕಳಚುವ ಕಾರ್ಯವಾಗಬೇಕು ಸಂಸದರು ಆಗ್ರಹಿಸಿ ಇದರ ಬಗ್ಗೆ ಸದನದ ಒಳಗೂ ಹಾಗೂ ಹೊರಗೂ ಸಹಾ ಹೋರಾಟವನ್ನು ಮಾಡಲಾಗುವುದು ಈ ಸರ್ಕಾರದಲ್ಲಿ ಸ್ಲಗರ್, ಕಳ್ಳರಿಗೆ ದರೋಡೆಕೋರರಿಗೆ ರಾಜ ಮರ್ಯಾದೆ ಕೂಡಲಾಗುತ್ತಿದೆ. ಆದರೆ ಇಂತಹ ವ್ಯಕ್ತಿಗಳ ಮೇಲೆ ವಿನಾ ಕಾರಣ ಹಲ್ಲೆ ಮಾಡುತ್ತಿದ್ದಾರೆ ಎಂದು ಸಂಸದರು ದೂರಿದರು.

ಮಾಜಿ ಶಾಸಕರಾದ ಜಿ.ಎಚ್. ತಿಪ್ಪಾರೆಡ್ಡಿ ಮಾತನಾಡಿ, ಪೋಲಿಸರ ಈ ನಡೆಯನ್ನು ಖಂಡಿಸಿದ ಅವರು ವಿನಾಕಾರಣ ನಮ್ಮವರ ಮೇಲೆ ಹಲ್ಲೆ ಮಾಡಿದ್ದಾರೆ. ಹನುಮಂತೇಗೌಡ ರವರು ಸೌಮ್ಯ ಸ್ವಭಾದವರಾಗಿದ್ದಾರೆ ನಮ್ಮ ಪಕ್ಷದ ಸಂಘಟನೆಯನ್ನು ಮಾಡುವಲ್ಲಿ ತೊಡಗಿದ್ದಾರೆ. ಪೋಲಿಸರಿಗೆ ಇವರ ಗುರುತನ್ನುಹೇಳಿದರುಸಹಾಪೋಲಿಸದರು ಹಲ್ಲೆ ಮಾಡಿದ್ದಾರೆ. ಇನ್ನೂ ಎರಡು ದಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಬೇಕಿದೆ. ನಗರದಲ್ಲಿ ಹಲವಾರು ಜನ ವಿನಾ ಕಾರಣ ತೊಂದರೆಯನ್ನು ನೀಡುತ್ತಾರೆ ಅಂತಹರಿಗೆ ಪೋಲಿಸ್ ಇಲಾಖೆ ಕಾನೂನು ಕ್ರಮ ತೆಗೆದುಕೊಳ್ಳಲಿ ಆದರೆ ವಿನಾ ಕಾರಣ ಏನು ಮಾಡದ ಇಂತಹ ವ್ಯಕ್ತಿಗಳ ಮೇಲೆ ಹಲ್ಲೆ ಮಾಡುವುದು ಸರಿಯಲ್ಲ, ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಇಲಾಖೆಯವರು ಅತನ ಮೇಲೆ ಸೂಕ್ತವಾದ ಕ್ರಮವನ್ನು ಜರುಗಿಸಬೇಕಿದೆ. ಈ ಪ್ರಕರಣವನ್ನು ನಮ್ಮ ನಾಯಕರ ಗಮನಕ್ಕೂ ಸಹಾ ತೆಗೆದುಕೊಂಡು ಹೋಗಲಾಗವುದು ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಮುರಳಿ, ಮಾಜಿ ಅಧ್ಯಕ್ಷ ನರೇಂದ್ರನಾಥ್, ಮುಖಂಡರಾದ ಕುಮಾರಸ್ವಾಮಿ, ಮೋಹನ್ ಇತರರು ಹಾಜರಿದ್ದರು.

# ಯೋಗಿನಾರೇಯಣ ಯತೀಂದ್ರರ 299ನೇ ಜಯಂತಿ ಉದ್ಘಾಟಿಸಿದ ಶಾಸಕ ಡಾ.ಚಂದ್ರಪ್ಪ

» **ಹೊಳಲ್ಕೆರೆ**

ಬೇರೆ ಸಮಾಜದವರು ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಳ್ಳಲು ಹೇಗೆ ಪ್ರಯತ್ನಿಸುತ್ತಾರೋ ಅದೇ ರೀತಿ ನೀವುಗಳು ಸರ್ಕಾರದಿಂದ ಸಿಗುವ ಸವಲತ್ತುಗಳನ್ನು ಪಡೆದುಕೊಳ್ಳುವಲ್ಲಿ ಮುಂದಾಗಬೇಕೆಂದು ಶಾಸಕ ಡಾ.ಎಂ.ಚಂದ್ರಪ್ಪ ಬಲಿಜ ಜನಾಂಗಕ್ಕೆ ಕರೆ ನೀಡಿದರು.

ಪಟ್ಟಣದ ಸಂವಿಧಾನ ಸೌಧದಲ್ಲಿ ಭಾನುವಾರ ಕಾಲಜ್ಞಾನಿ ಯೋಗಿ ನಾರೇಯಣ ಯತೀಂದ್ರರ 299 ನೇ ಜಯಂತಿಯಲ್ಲಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.



ಕಳೆದ ವರ್ಷ ಒಂದು ಎಕರೆ ಜಮೀನು ನೀಡುವಂತೆ ಕೇಳಿದ್ದೀರಿ. ಮತ್ತೆ ಮುಂದಿನ ವರ್ಷವೆ ನೀವುಗಳು ನೆನಪು ಮಾಡಿಕೊಂಡು ಕೇಳುವುದು. ಒಂದು ಎಕರೆ ಜಮೀನು ನೀಡುವಂತೆ ಕಳೆದ ವರ್ಷವೆ ತಹಶೀಲ್ದಾರ್‌ಗೆ ಆದೇಶಿಸಿದ್ದೇನೆ. ಮುತುವರ್ಜಿ ವಹಿಸಿ ಪಡೆದುಕೊಳ್ಳಬೇಕು. ದೇವಸ್ಥಾನವನ್ನು ಕಟ್ಟಿಸಿಕೊಳ್ಳಿ. ಯಾದವ, ಕುಂಚಿಟಿಗ ಸಮಾಜದವರು ಈಗಾಗಲೆ ಭೂಮಿಯನ್ನು ಮಂಜೂರು ಮಾಡಿಸಿಕೊಂಡಿದ್ದಾರೆಂದು ಹೇಳಿದರು.

31 ವರ್ಷಗಳ ಹಿಂದೆಯೇ ಶಾಸಕನಾಗಿ ಅಂದಿನಿಂದ ಇಲ್ಲಿಯವರೆಗೂ ಸಾರ್ವಜನಿಕರ ಬದುಕನ್ನು ಅರ್ಥಮಾಡಿಕೊಂಡು ಎಲ್ಲಿ ಯಾರಿಗೆ ಏನು ಅನುಕೂಲ ಮಾಡಿದರೆ ಒಳ್ಳೆಯದಾಗುತ್ತದೆನ್ನುವ ಅರಿವಿಟ್ಟುಕೊಂಡು ಕೆಲಸ ಮಾಡುತ್ತಿದ್ದೇನೆ. ತಾಳಿಕಟ್ಟೆಯಲ್ಲಿ ಎಂಟು ದಿನಗಳ ಕಾಲ ನಡೆಯುವ ತೋಪು ಜಾತ್ರೆಗೆ ರಸ್ತೆ, ದೀಪ, ಕುಡಿಯುವ ನೀರಿಗಾಗಿ 30 ಕೋಟಿ ರೂ.ಗಳನ್ನು ಖರ್ಚು ಮಾಡಿದ್ದೇನೆ. ಮಕ್ಕಳನ್ನು ಕಡ್ಡಾಯವಾಗಿ ಶಿಕ್ಷಣವಂತರನ್ನಾಗಿ ಮಾಡುವ ಜವಾಬ್ದಾರಿ ತಾಯಂದಿರ ಮೇಲಿದೆ. ವಿದ್ಯೆ ಜೊತೆ ಸಂಸ್ಕಾರ ಕಲಿಸಿದಾಗ ಸಮಾಜದಲ್ಲಿ ಗೌರವದಿಂದ ಬಾಳಬಹುದು ಎಂದು ತಿಳಿಸಿದರು.

ಬಲಿಜ ಸಂಘದ ರಾಜ್ಯಾಧ್ಯಕ್ಷ ಬೆಂಗಳೂರಿನ ಎಂ.ಎನ್.ಮುನಿಕೃಷ್ಣ, ಹೊಳಲ್ಕೆರೆ ತಾಲ್ಲೂಕು ಯೋಗಿನಾರೇಯಣ ಬಲಿಜ ಸಂಘದ ಅಧ್ಯಕ್ಷ ಬಿ.ಎಸ್.ಮಂಜುನಾಥ್, ಪುರಸಭೆ ಅಧ್ಯಕ್ಷ ಎಲ್.ವಿಜಯಸಿಂಹ ಖಾಟ್ರೋತ್, ಉಪಾಧ್ಯಕ್ಷೆ ಹೆಚ್.ಆರ್.ನಾಗರತ್ನ ವೇದಮೂರ್ತಿ, ಡಾ.ಓಬಳೇಶ್‌ಘಟ್ಟಿ, ಎಸ್.ನರಸಿಂಹಮೂರ್ತಿ, ಎಂ.ಜೆ.ಸೂರ್ಯನಾರಾಯಣ

ಬಿ.ಆರ್.ಮಂಜುನಾಥ್, ಎಂ.ಕೆ.ಪ್ರಹ್ಲಾದ್, ಹನುಮಂತಪ್ಪ, ಅನುಗ್ರಹ ಶ್ರೀನಿವಾಸ್, ವಾಣಿಘಟ್ಟಿ ಕೊಂಡಪ್ಪ, ಗುರುರಾಜ್, ಸೋಮಶೇಖರಪ್ಪ ಹಾಗೂ ಬಲಿಜ ಸಮಾಜದ ಮುಖಂಡರುಗಳು ಜಯಂತಿಯಲ್ಲಿ ಭಾಗವಹಿಸಿದ್ದರು.



ಸಾಸಲು ಗ್ರಾಮದಲ್ಲಿ ಮೂರು ಕೋಟಿ ರೂ.ವೆಚ್ಚದಲ್ಲಿ ನೂತನ ಸಿ.ಸಿ.ರಸ್ತೆ ಕಾಮಗಾರಿಗೆ ಶಾಸಕ ಡಾ.ಎಂ. ಚಂದ್ರಪ್ಪನವರಿಂದ ಭೂಮಿಪೂಜೆ.

### ಸಿ.ಐ.ಟಿ.ಯು.ವತಿಯಿಂದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ



» **ಚಿತ್ರದುರ್ಗ**

ದೇಶಕ್ಕೆ ಸ್ವಾತಂತ್ರ್ಯ ಸಿಕ್ಕು ಎಪ್ಪತ್ತು ವರ್ಷಗಳಾಗಿದ್ದರೂ ಮಹಿಳೆಯ ಮೇಲೆ ನಡೆಯುತ್ತಿರುವ ದೌರ್ಜನ್ಯ, ಶೋಷಣೆ, ದಬ್ಬಾಳಿಕೆ, ಅತ್ಯಾಚಾರ ಇನ್ನು ನಿಂತಿಲ್ಲ ಎಂದು ಸಂಜೀವಿನಿ ನೌಕರರ ಸಂಘ ಹಾಗೂ ಫಲಾನುಭವಿಗಳ ಸಂಘದ ರಾಜ್ಯ ಮುಖಂಡರಾದ ಮಾಳಮ್ಮ ತಿಳಿಸಿದರು. .ಐ.ಟಿ.ಯು. ವತಿಯಿಂದ ಒನಕೆ ಓಬವ್ವ ವೃತ್ತದ ಸಮೀಪ ಶನಿವಾರ ನಡೆದ 117 ನೇ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದರು. ಸ್ವಾತಂತ್ರ್ಯ ಹೋರಾಟದಲ್ಲಿ ಬ್ರಿಟೀಷರ ವಿರುದ್ದ ಮಹಿಳೆಯರು ಹೋರಾಡಿದ ಇತಿಹಾಸವಿದೆ. ರೈತರು, ಮಹಿಳೆಯರು, ಕಾರ್ಮಿಕರನ್ನು ಬಿಟ್ಟು ದೇಶವಿಲ್ಲ. ಸ್ವಾತಂತ್ರ್ಯಕ್ಕಾಗಿ ಮಹಿಳೆಯರ ತ್ಯಾಗ, ಬಲಿದಾನವಿದೆ. ಮಹಿಳೆಯರ ಮೇಲಿನ ಅತ್ಯಾಚಾರ ಕಡಿಮೆಯಾಗಿಲ್ಲ. ಯಾವುದೇ ಸರ್ಕಾರ ಆಡಳಿತಕ್ಕೆ ಬರಲಿ ಮಹಿಳೆಯರ ರಕ್ಷಣೆ ಕುರಿತು ಚಿಂತಿಸುತ್ತಿಲ್ಲ. ಈ ಸಂಬಂಧ ಈಗಲಾದರೂ ಮಹಿಳೆಯರು ಎಚ್ಚೆತ್ತುಕೊಳ್ಳಬೇಕೆಂದು ಜಾಗೃತಿಗೊಳಿಸಿದರು. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕಳೆದ ಏಳರಂದು ಮಂಡಿಸಿರುವ ಬಜೆಟ್‌ನಲ್ಲಿ ಮಹಿಳೆಯರಿಗೆ ಯಾವುದೇ ಉಪಯೋಗವಾಗಿಲ್ಲ. ಮುಂದಿನ ದಿನಗಳಲ್ಲಿ ಮಹಿಳೆಯರಿಗೆ ಬಜೆಟ್‌ನಲ್ಲಿ ಪ್ರತ್ಯೇಕ ಹಣ ಮೀಸಲಿಡಬೇಕೆಂದು ಒತ್ತಾಯಿಸಿದರು.ಸಿ.ಐ.ಟಿ.ಯು.ಜಿಲ್ಲಾ ಸಂಚಾಲಕಿ ಎನ್.ನಿಂಗಮ್ಮ ಮಾತನಾಡಿ ಅನಾದಿ ಕಾಲದಿಂದಲೂ ಮಹಿಳೆಯ ಮೇಲೆ ನಡೆಯುತ್ತಿರುವ ಶೋಷಣೆ, ದೌರ್ಜನ್ಯ, ಅತ್ಯಾಚಾರ ಇನ್ನು ನಿಂತಿಲ್ಲ. ಅಗಸರಹಳ್ಳಿಯಲ್ಲಿ ಮೂರನೆ ತರಗತಿ ಬಾಲಕಿಗೆ ಐಸ್‌ಕ್ರೀಂ, ಚಾಕಲೇಟ್ ಆಸೆ ತೋರಿಸಿ ವೃದ್ದನೋರ್ವ ಅತ್ಯಾಚಾರವೆಸಗಿದ್ದಾನೆ. ಇದುವರೆವಿಗೂ ಕಾಮುಕನನ್ನು ಬಂಧಿಸಿಲ್ಲ. ಶಿಕ್ಷಣದಲ್ಲಿ ಮಹಿಳೆಗೆ ಸಮಾನತೆಯಿಲ್ಲ. ಕೇವಲ ಅಡುಗೆ ಕೋಣೆಗಷ್ಟೆ ಮಹಿಳೆಯನ್ನು ಮೀಸಲಿಡಲಾಗಿದೆ. ಎಲ್ಲಾ ರಂಗಗಳಲ್ಲಿಯೂ ಪುರುಷರಿಗೆ ಸಮಾನವಾಗಿ ಮಹಿಳೆ ಸಾಧನೆ ಮಾಡುತ್ತಿದ್ದಾಳೆ. ಹಾಗಾಗಿ ಮಹಿಳೆ ಎಚ್ಚೆತ್ತುಕೊಂಡು ತನ್ನ ಹಕ್ಕುಗಳನ್ನು ಪಡೆದುಕೊಳ್ಳಬೇಕೆಂದು ಹೇಳಿದರು.ಸಿ.ಐ.ಟಿ.ಯು. ಜಿಲ್ಲಾ ಸಂಚಾಲಕ ಡಿ.ಎಂ.ಮಲಿಯಪ್ಪ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡುತ್ತ ಮಹಿಳೆ ಮೇಲಿನ ದೌರ್ಜನ್ಯ, ಶೋಷಣೆ ವಿರುದ್ದ ಹಿಂದಿನಿಂದಲೂ ಹೋರಾಟ ಮಾಡಿಕೊಂಡು ಬರಲಾಗುತ್ತಿದೆ. ಮಹಿಳೆಗೆ ಸಮಾನ ಕೆಲಸಕ್ಕೆ ಸಮಾನ ವೇತನ ಸಿಗಬೇಕು ಎಂದರು.

ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನಡೆಯದಂತೆ ಸುರಕ್ಷತೆ ಕ್ರಮ ವಹಿಸಬೇಕು. ರಾತ್ರಿ ಪಾಳೆಯದಲ್ಲಿ ಮಹಿಳೆ ಕೆಲಸ ಮಾಡುವುದು ನಿಲ್ಲಬೇಕು. ಒಂದು ವೇಳೆ ಕೆಲಸ ಮಾಡಬೇಕಾದಂತ ಅನಿವಾರ್ಯತೆ ಕಂಡು ಬಂದಲ್ಲಿ ಸುರಕ್ಷಿತ ಪ್ರಯಾಣ ಮತ್ತು ಇತರೆ ಸೌಲತ್ತುಗಳನ್ನು ಒದಗಿಸುವಂತೆ ಮನವಿ ಮಾಡಿದರು. ರಾಜಮ್ಮ, ಕೆ.ಮಂಜುಳ, ಇಂದಿರಮ್ಮ, ಕಲ್ಯಾಣಮ್ಮ, ಸಣ್ಣಮ್ಮ, ಚಂದ್ರಮ್ಮ, ಜಯಲಕ್ಷ್ಮಿ, ಹನುಮಕ್ಕ, ತನುಜ, ಟಿ.ತಿಪ್ಪೇಸ್ವಾಮಿ, ಸಿ.ಐ.ಟಿ.ಯು.ಸಂಚಾಲಕ ಸಿ.ಕೆ.ಗೌಸ್‌ಪೀರ್, ಟಿ.ನಿಂಗಣ್ಣ ಸೇರಿದಂತೆ ನೂರಾರು ಮಹಿಳೆಯರು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಪಾಲ್ಗೊಂಡಿದ್ದರು.



ಚಳ್ಳಕೆರೆ ತಾಲ್ಲೂಕಿನ ನಾಯಕನಹಟ್ಟಿಯ ತಿಪ್ಪೇರುದ್ರಸ್ವಾಮಿ ರಥೋತ್ಸವದಲ್ಲಿ ಲೋಕೋಪಯೋಗಿ ಸಚಿವ ಸತೀಶ್‌ಜಾರಕಿಹೊಳಿ ಭಾವಚಿತ್ರ ಹಿಡಿದು ಸಾಗಿದ ಅಭಿಮಾನಿಗಳು.

## ಪ್ರಮುಖ ಸುದ್ದಿ

# ಬಿಸಿಯೂಟ ಸಿಬ್ಬಂದಿಗೆ ತರಬೇತಿ ಕಾರ್ಯಾಗಾರ

» **ಹೊಳಲ್ಕೆರೆ**

ಮಕ್ಕಳು ದೇವರಿದ್ದಂತೆ. ಕೆಟ್ಟದ್ದು, ಗೊತ್ತಿಲ್ಲ. ಶುಚಿ, ರುಚಿಯಾಗಿ ಅಡುಗೆ ತಯಾರಿಸಿ ಬಡಿಸಿ ಎಂದು ಶಾಸಕ ಡಾ.ಎಂ.ಚಂದ್ರಪ್ಪ ಬಿಸಿಯೂಟ ತಯಾರಕರಿಗೆ ಸೂಚಿಸಿದರು.

ಪಟ್ಟಣದ ಸಂವಿಧಾನಸೌಧದಲ್ಲಿ ಶಾಲಾ ಶಿಕ್ಷಣ ಮತು ಸಾಕ್ಷರತಾ ಇಲಾಖೆ, ಪ್ರಧಾನ ಮಂತ್ರಿ ಘೋಷಣ್ ಶಕ್ತಿ ನಿರ್ಮಾಣ್ ವತಿಯಿಂದ ಮಧ್ಯಾಹ್ನದ ಬಿಸಿಯೂಟ ತಯಾರಕರಿಗೆ ಏರ್ಪಡಿಸಲಾಗಿದ್ದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಸರ್ಕಾರ ನಿಮಗೆ ಕೊಡುತ್ತಿರುವುದು ಕಡಿಮೆ ಸಂಬಳ. ಅಧಿವೇಶನದಲ್ಲಿ ಮಾತನಾಡಿ ತಿಂಗಳಿಗೆ ಕನಿಷ್ಠ ಹತ್ತು ಸಾವಿರ ರೂ.ಗಳ ಗೌರವ ಧನವನ್ನು ನೀಡುವಂತೆ ಧ್ವನಿ ಎತ್ತುತ್ತೇನೆ. ಮಕ್ಕಳಿಗೆ ವಂಚನೆ ಮಾಡಬೇಡಿ. ಮುಂದಿನ ದಿನಗಳಲ್ಲಿ ಸರ್ಕಾರ ನಿಮ್ಮ ಸಂಬಳ ಜಾಸ್ತಿ ಮಾಡುತ್ತದೆ ಎಂಬ ಭರವಸೆ ನೀಡಿದರು.

ಮಕ್ಕಳ ಲಾಲನೆ, ಪೋಷಣೆ ತುಂಬಾ ಮುಖ್ಯ. ಸರ್ಕಾರಿ ಶಾಲೆಯ ಮಕ್ಕಳನ್ನು ನಿಮ್ಮ ಸ್ವಂತ ಮಕ್ಕಳಂತೆ ಜೋಪಾನವಾಗಿ ನೋಡಿಕೊಳ್ಳಿ. ಮಕ್ಕಳ ಸೇವೆ ಮಾಡಿದರೆ ದೇವರ ಸೇವೆ ಮಾಡಿದಂತೆ ಸರ್ಕಾರ ಎಲ್ಲಾ ರೀತಿಯ ಸವಲತ್ತುಗಳನ್ನು ನೀಡುತ್ತಿದೆ. ಪೌಷ್ಠಿಕಾಂಶವುಳ್ಳ ಊಟದ ಜೊತೆ ಶಿಕ್ಷಣದ ಕಡೆಗೂ ಹೆಚ್ಚಿನ ಒತ್ತು ಕೊಡಬೇಕೆಂದು ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.




ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ವಿಶ್ವನಾಥ್, ಕ್ಷೇತ್ರ ಸಮನ್ವಯಾಧಿಕಾರಿ ಸುರೇಂದ್ರನಾಥ್, ನಾಗರಾಜಯ್ಯ, ಶ್ರೀಧರ್‌ಶೆಟ್ರು, ಗಿರೀಶ್, ಬಸವರಾಜಪ್ಪ,ರಂಗಪ್ಪ, ವೀರೇಶ್, ಉಮೇಶ್, ಪರಮೇಶ್ವರ ತರಬೇತಿಯಲ್ಲಿ ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T